RNI: KNKAN/ 25/A5387 | ಸಂಪಾದಕರು: ರಾಜೇಶ್ವರಿ ಎನ್. ಓಲೇಕಾರ | ಸಿಇಒ: ಚಂದ್ರಶೇಖರ ಎನ್.ಕೆ. | ಸಹ ಸಂಪಾದಕರು: ಶಿವಕುಮಾರ

ಸಮಾಲೋಚನೆ ಸುದ್ದಿ

ಕನ್ನಡ ದಿನ ಪತ್ರಿಕೆ

ನೇರ ನಿಖರ ನಿರ್ದಿಷ್ಟ

ಸಂಪುಟ (Volume): 1 ಸಂಚಿಕೆ (Issue): 230 ಪುಟ (Page): 4 ದರ Rs. 2 ಗುರುವಾರ 19 ನವೆಂಬರ್ 2026 ● 19 NOVEMBER 2026 ಹಾವೇರಿ ಧಾರವಾಡ ಗದಗ ಕೊಪ್ಪಳ ವಿಜಯನಗರ ಬೆಳಗಾವಿ ಉತ್ತರ ಕನ್ನಡ samalochanersuddi@gmail.com

ಮೊ.ನಂ: 8095203132 PMG/KA/NK/HVR-59/2026-28 SAMALOCHANE RANEBENNURSUDDI Kannada Daily Morning

ಜಿಲ್ಲೆಯಲ್ಲಿ ಮತ್ತೆ ಕಿಚ್ಚು ಹೆಚ್ಚಿಸಿದ ಕಬ್ಬು ದರ ನಿಗದಿ ಹೋರಾಟ..!

ಸಚಿವರ ಮನೆ ಎದುರು ಧರಣಿಗೆ ಅವಕಾಶ ನಿರಾಕರಣೆ । ಬಂಕಾಪುರ ಟೋಲ್‌ಗೇಟ್ ಬಂದ್ ಮಾಡಿದ ರೈತರು

ಸಮಾಲೋಚನೆ ಸುದ್ದಿ ಹಾವೇರಿ

ಕಬ್ಬಿನ ದರ ನಿಗದಿ ವಿಚಾರದಲ್ಲಿ ಜಿಲ್ಲೆಗೆ ಆಗಿರುವ ಅನ್ಯಾಯವನ್ನು ಸರಿಪಡಿಸಿ, ಪ್ರತಿ ಟನ್ ಕಬ್ಬಿಗೆ 3,600 ದರ ನೀಡಬೇಕು ಎಂದು ಆಗ್ರಹಿಸಿ ಜಿಲ್ಲೆಯ ರೈತರು ನಡೆಸುತ್ತಿರುವ ಹೋರಾಟ ಬುಧವಾರ ಮತ್ತಷ್ಟು ತೀವ್ರ ಸ್ವರೂಪ ಪಡೆದುಕೊಂಡಿದ್ದು, ಮತ್ತಷ್ಟು ಹೋರಾಟದ ಕಿಚ್ಚು ಜಿಲ್ಲೆಯಲ್ಲಿ ಹೆಚ್ಚಾಗುವ ಸಾಧ್ಯತೆ ಕಂಡು ಬಂದಿತು.

ಬುಧವಾರ ಹಾವೇರಿ ನಗರದಲ್ಲಿರುವ ಸಕ್ಕರೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ರುದ್ರಪ್ಪ ಲಮಾಣಿಯವರ ನಿವಾಸದ ಎದುರು ಅಹೋರಾತ್ರಿ ಧರಣಿ ನಡೆಸಲು ರೈತ ಸಂಘಟನೆಗಳು ಸಜ್ಜಾಗಿ ನಿಂತಿದ್ದರು. ಅಲ್ಲದೇ ಸಾವಿರಾರು ರೈತರು ಬುಧವಾರ ಬೆಳಿಗ್ಗೆ ಹಾವೇರಿಯಲ್ಲಿ ಜಮಾಯಿಸಿ ಪ್ರತಿಭಟನೆಗೆ ಮುಂದಾದರು. ಆದರೆ ಸಚಿವರ ನಿವಾಸದ ಸುತ್ತಮುತ್ತ ಜಿಲ್ಲಾಡಳಿತ ನಿಷೇಧಾಜ್ಞೆ ಜಾರಿಗೊಳಿಸಿದ್ದರಿಂದ ಧರಣಿ ನಡೆಸಲು ಅವಕಾಶ ಸಿಗದೆ ಇರುವ ಕಾರಣ ರೈತರು ಮತ್ತಷ್ಟು ಆಕ್ರೋಶಗೊಂಡ ಸರ್ಕಾರ ಹಾಗೂ ಸಚಿವರ ವಿರುದ್ಧ ಆಕ್ರೋಶ ಹಾಕಿದ ಘಟನೆ ನಡೆಯಿತು.

ಇತ್ತ ಸಚಿವರ ಮನೆ ಎದುರು ಧರಣಿ ನಡೆಸಲು ಅವಕಾಶ ಸಿಗದ ಹಿನ್ನೆಲೆಯಲ್ಲಿ ಆಕ್ರೋಶಗೊಂಡ ರೈತರು ನೇರವಾಗಿ ಶಿಗ್ಗಾವಿ ಬಳಿವಿರುವ ಬಂಕಾಪುರ ಟೋಲ್‌ಗೇಟ್ ಬಂದ್ ಮಾಡಿ ಪ್ರತಿಭಟನೆ ನಡೆಸಿದರು. ಈ ಸಮಯದಲ್ಲಿ ಪೋಲಿಸರು ಹಾಗೂ ರೈತ ಮುಖಂಡರ ನಡುವೆ ವಾಗ್ವಾದ ಹಾಗೂ ಮಾತಿನ ಚಕಮಕಿ ನಡೆದವು.



ರಾಣೆಬೆನ್ನೂರ ನಗರದಲ್ಲಿ ರೈತ ಮುಖಂಡರ ಬಂಧನ

ಹಾವೇರಿಯಲ್ಲಿ ಸಚಿವ ರುದ್ರಪ್ಪ ಲಮಾಣಿ ಅವರ ಮನೆಯ ಸುತ್ತ ನಿಷೇದಾಜ್ಞೆ ಜಾರಿ ಮಾಡಿದ ಹಿನ್ನೆಲೆ ರೈತರು ರಾಣೆಬೆನ್ನೂರ ನಗರದಲ್ಲಿರುವ ನಿವಾಸಕ್ಕೆ ಮುತ್ತಿಗೆ ಹಾಕಲು ಮುಂದಾದರು. ಈ ಸಮಯದಲ್ಲಿ ಸಚಿವರ ಮನೆಯ ಹತ್ತಿರ ಬಂದು ಪ್ರತಿಭಟನೆ ಮಾಡಲು ಮುಂದಾದ ಸುಮಾರು ಐವತ್ತು ಜನ ರೈತರನ್ನು ಪೋಲಿಸರು ಬಂಧಿಸಿ ವಾಹನದ ಮೂಲಕ ಅವರನ್ನ ಪರಿವೀಕ್ಷಣೆ ಮಂದಿರಕ್ಕೆ ಕರೆದುಕೊಂಡು ಹೋದರು. ಅಲ್ಲಿಯೂ ಸಹ ಸರ್ಕಾರದ ವಿರುದ್ಧ ಹಾಗೂ ಸಚಿವರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸಚಿವ ರುದ್ರಪ್ಪ ಲಮಾಣಿ ಮನೆಗೆ ಖಾಕಿ ಕಾವಲು..

ರೈತರು ಸಚಿವ ರುದ್ರಪ್ಪ ಲಮಾಣಿ ಅವರ ಮನೆ ಮುಂದೆ ಅಹೋರಾತ್ರಿ ಹೋರಾಟಕ್ಕೆ ಮುಂದಾಗಿದ್ದರು. ಇದರಿಂದ ಎಚ್ಚೆತ್ತಕೊಂಡ ಜಿಲ್ಲಾಧಿಕಾರಿ ಹಾವೇರಿ ನಗರದಲ್ಲಿರುವ ಸಚಿವರು ನಿವಾಸದ ಬಳಿ ನಿಷೇಧಾಜ್ಞೆ ಹೊರಡಿಸಿದರು. ಇದರಿಂದ ಸಚಿವರ ನಿವಾಸದ ಸುತ್ತಮುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿತ್ತು.





ಕಾರ್ಖಾನೆ ಮಾಲೀಕರು ಮಾತುಕತೆಗೆ ಬರುತ್ತಿಲ್ಲ; ರೈತರ ಪ್ರತಿಭಟನೆ ಮುಂದುವರಿಯಲಿ: ರೈತ ಮುಖಂಡ ಚುನ್ನಪ್ಪ ಪೂಜಾರಿ ಎಚ್ಚರಿಕೆ

ಜಿಲ್ಲೆಯ ಸಕ್ಕರೆ ಕಾರ್ಖಾನೆಗಳ ಮಾಲೀಕರು ತಲೆಮರೆಸಿಕೊಂಡಿದ್ದಾರೋ ಏನೋ, ರೈತರನ್ನು ಮಾತುಕತೆಗೆ ಕರೆದು ಸಮಸ್ಯೆ ಬಗೆಹರಿಸುವ ಪ್ರಯತ್ನ ಮಾಡುತ್ತಿಲ್ಲ. ಹೀಗಾಗಿ ನಮ್ಮ ಪ್ರತಿಭಟನೆ ಮುಂದುವರಿಯಲಿದೆ ಎಂದು ರೈತ ಮುಖಂಡ ಚುನ್ನಪ್ಪ ಪೂಜಾರಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಾರ್ಖಾನೆ ಮಾಲೀಕರು ಮುಂದೆ ಬಂದು ರೈತರೊಂದಿಗೆ ಮಾತುಕತೆ ನಡೆಸುತ್ತಿಲ್ಲ. ಈ ಸಮಸ್ಯೆಗೆ ಗಟ್ಟಿಯಾದ ನಿರ್ಧಾರ ಕೈಗೊಂಡು ಜವಾಬ್ದಾರಿ ಯಾರು ಹೊರುತ್ತಾರೆ ಎಂಬುದು ಸ್ಪಷ್ಟವಾಗಬೇಕು. ಸಂಬಂಧಪಟ್ಟವರು ಜವಾಬ್ದಾರಿ ತೆಗೆದುಕೊಂಡು ರೈತರ ಬೇಡಿಕೆಗಳಿಗೆ ಸ್ಪಂದಿಸಿದ ಬಳಿಕವಷ್ಟೇ ಮುಂದಿನ ನಿರ್ಧಾರ ಕೈಗೊಳ್ಳುತ್ತೇವೆ ಎಂದು ತಿಳಿಸಿದ್ದಾರೆ. ಅಲ್ಲಿಯವರೆಗೆ ಪ್ರತಿಭಟನೆ ಮುಂದುವರಿಯಲಿದೆ. ಟೋಲ್ ಬಂದ್ ಹೋರಾಟವನ್ನು ಮುಂದುವರಿಸಬೇಕೇ ಅಥವಾ ಬೇಡವೇ ಎಂಬುದನ್ನು ಮುಂದಿನ ಬೆಳವಣಿಗೆಗಳ ಆಧಾರದಲ್ಲಿ ನಿರ್ಧರಿಸುತ್ತೇವೆ ಎಂದು ಚುನ್ನಪ್ಪ ಪೂಜಾರಿ ಹೇಳಿದ್ದಾರೆ.

ಭಾರತವು ಆರ್ಥಿಕ ದುರಂತದ ಅಂಚಿನಲ್ಲಿದೆ

ವೋಟ್ ಚೋರಿ, ನಿರುದ್ಯೋಗ ಸಮಸ್ಯೆ ಆರೋಪ ಹೊರಿಸಿದ ರಾಹುಲ್ ಗಾಂಧಿ

ನ್ಯೂಯಾರ್ಕ್: ಅಮೆರಿಕದಲ್ಲಿ ಭಾರತೀಯ ಆರ್ಥಿಕತೆಯ ಕುರಿತು ರಾಹುಲ್ ಗಾಂಧಿ ನೀಡಿರುವ ಹೇಳಿಕೆಗಳು ಮತ್ತು ಮತ ಕಳ್ಳತನ ಆರೋಪವನ್ನು ಅವರು ಪುನರುಚ್ಚರಿಸಿರುವುದು, ಬಿಜೆಪಿ ಕಡೆಯಿಂದ ತೀವ್ರ ಪ್ರತಿಕ್ರಿಯೆಗೆ ಕಾರಣವಾಗಿದೆ. ಬಿಜೆಪಿ ಅವರನ್ನು "ಭಾರತ ವಿರೋಧಿ ಪ್ರಚಾರದ ನಾಯಕ" ಎಂದು ಕರೆದಿದೆ.

ಕೊಲಂಬಿಯಾ ವಿಶ್ವವಿದ್ಯಾಲಯದಲ್ಲಿ ಮಾತನಾಡಿದ ರಾಹುಲ್ ಗಾಂಧಿ, "ದೇಶದಲ್ಲಿನ ಭಾರಿ ನಿರುದ್ಯೋಗ ಸಮಸ್ಯೆ ಮತ್ತು ಶಿಕ್ಷಣ ವ್ಯವಸ್ಥೆಗೆ ಸಂಬಂಧಿಸಿದ ಆಳವಾದ ಕಳವಳಗಳನ್ನು ಗಮನಿಸಿದರೆ, ಭಾರತವು ಆರ್ಥಿಕ ಬಿಕ್ಕಟ್ಟಿನತ್ತ ಸಾಗುತ್ತಿದೆ" ಎಂದು ಅಭಿಪ್ರಾಯಪಟ್ಟರು.

"ಸರಳವಾಗಿ ಹೇಳುವುದಾದರೆ, ಭಾರತವು ಆರ್ಥಿಕ ದುರಂತದ ಅಂಚಿನಲ್ಲಿದೆ. ಇದೇ ವಾಸ್ತವ. ಯಾರಾದರೂ ಇದನ್ನು ಕಡೆಗಣಿಸಬಹುದು, ಮಾಧ್ಯಮಗಳು ಇದನ್ನು ನಿರ್ಲಕ್ಷಿಸಬಹುದು, ಆದರೆ ಭಾರತವು ಭಾರಿ ನಿರುದ್ಯೋಗ ಸಮಸ್ಯೆಯನ್ನು ಎದುರಿಸುತ್ತಿದೆ. ಹಾಗೆಯೇ, ಭಾರತದ ಶಿಕ್ಷಣ ವ್ಯವಸ್ಥೆಯಲ್ಲೂ ಗಂಭೀರ ಸಮಸ್ಯೆಗಳಿವೆ" ಎಂದು ಲೋಕಸಭೆ ಪ್ರತಿಪಕ್ಷ ನಾಯಕ ಹೇಳಿದರು.

ಭಾರತದ ಯುವಜನತೆಯ ಕುರಿತು ಕಾರ್ಯಕ್ರಮದ ನಿರ್ವಾಹಕಿ ಲಿಡಿಯಾ ಪೋಲ್‌ಗ್ರೀನ್ ಕೇಳಿದ ಪ್ರಶ್ನೆಗೆ, ರಾಹುಲ್ ಗಾಂಧಿ ಅವರು ಪ್ರಸ್ತುತ ಪರಿಸ್ಥಿತಿ "ನಿರಾಶಾದಾಯಕ"ವಾಗಿದೆ ಎಂದು ಹೇಳಿದರು.

"ದೇಶದ ಯುವಜನರ ಒಂದು ವರ್ಗವು ಮಧ್ಯಮ ವರ್ಗದ ಕುಟುಂಬಗಳಿಗೆ ಸೇರಿದವರಾಗಿದ್ದು, ಅವರು ಔಪಚಾರಿಕ ಶಿಕ್ಷಣವನ್ನು ಪಡೆದಿದ್ದಾರೆ. ಯುವಜನರಲ್ಲಿನ ಈ ಹತಾಶೆಗೆ ಮೂಲ ಕಾರಣವೇನೆಂದರೆ, ಅವರಿಗೆ ತಮ್ಮ ಭವಿಷ್ಯದ ಬಗ್ಗೆ ಯಾವುದೇ ಭರವಸೆ ಕಾಣುತ್ತಿಲ್ಲದಿರುವುದು" ಎಂದು ರಾಹುಲ್ ಗಾಂಧಿ ಪ್ರತಿಪಾದಿಸಿದರು.

ವೋಟ್ ಚೋರಿ ಪ್ರಸ್ತಾಪ:

ಇದೇ ಸಂವಾದದಲ್ಲಿ ರಾಹುಲ್ ಗಾಂಧಿ ಅವರು ಚುನಾವಣಾ ಆಯೋಗದ ವಿರುದ್ಧದ ತಮ್ಮ ಮತ ಕಳ್ಳತನ ಆರೋಪವನ್ನು ಪುನರುಚ್ಚರಿಸಿದರು. "2024ರಲ್ಲಿ ಮತ ಚಲಾಯಿಸಿದ್ದ 14 ಕೋಟಿ ಜನರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ. ಆದರೂ ಈ ವಿಷಯದಲ್ಲಿ ಚುನಾವಣಾ ಆಯೋಗ ಮೌನವಾಗಿದೆ. ಚುನಾವಣಾ ವ್ಯವಸ್ಥೆಯಲ್ಲಿ ಸುಧಾರಣೆ ತರದ ಹೊರತು ಏನೂ ಬದಲಾಗುವುದಿಲ್ಲ. ನಾವು ಈ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದೇವೆ. ಚುನಾವಣಾ ಅಕ್ರಮ ನಡೆದಿರುವುದಕ್ಕೆ ನಮ್ಮ ಬಳಿ ಸಾಕಷ್ಟು ಸಾಕ್ಷ್ಯಗಳಿವೆ" ಎಂದು ಕಾಂಗ್ರೆಸ್ ನಾಯಕ ಸ್ಪಷ್ಟಪಡಿಸಿದರು.

ಬಿಜೆಪಿ ಕೆಂಡಾಮಂಡಲ: ಇನ್ನು ರಾಹುಲ್ ಗಾಂಧಿಯವರ ಈ ಹೇಳಿಕೆಗೆ ಆಡಳಿತ ಪಕ್ಷದಿಂದ ತೀವ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಪ್ರತಿಪಕ್ಷ ನಾಯಕರು ವಿದೇಶದ ನೆಲದಲ್ಲಿ ದೇಶಕ್ಕೆ ಅವಮಾನ ಮಾಡಿದ್ದಾರೆ ಎಂದು ಆಡಳಿತ ಪಕ್ಷ ಆರೋಪಿಸಿದೆ.

"ರಾಹುಲ್ ಗಾಂಧಿ ಭಾರತ ವಿರೋಧಿ ಪ್ರಚಾರದ ನಾಯಕರಾಗಿದ್ದಾರೆ. ಭಾರತದ ಪ್ರಗತಿ ಮತ್ತು ಭಾರತೀಯ ಪ್ರಜಾಪ್ರಭುತ್ವದ ಬಗ್ಗೆ ಅವರಿಗಿರುವ ಸಹಜ ದ್ವೇಷವೇ, ಅವರು ವಿದೇಶಕ್ಕೆ ಹೋದಾಗಲೆಲ್ಲಾ ಭಾರತದ ಬಗ್ಗೆ ಕೆಟ್ಟದಾಗಿ ಮಾತನಾಡಲು ಕಾರಣವಾಗಿದೆ" ಎಂದು ಬಿಜೆಪಿ ವಕ್ತಾರ ಪ್ರದೀಪ್ ಭಂಡಾರಿ ಅವರು ತಮ್ಮ ಅಧಿಕೃತ ಎಕ್ಸ್ ಅಕೌಂಟ್ ಪೋಸ್ಟ್‌ನಲ್ಲಿ ಹರಿಹಾಯ್ದಿದ್ದಾರೆ. ಆರ್ಥಿಕತೆಯ ಕುರಿತು ಗಾಂಧಿಯವರ ಟೀಕೆಗಳಿಗೆ ಪ್ರತಿಕ್ರಿಯಿಸಿದ ಬಿಜೆಪಿ, ದೇಶದ ಬೆಳವಣಿಗೆಯ ದರ ಮತ್ತು ಜಾಗತಿಕ ಸಂಸ್ಥೆಗಳು ನೀಡಿರುವ ರೇಟಿಂಗ್‌ಗಳನ್ನು ಉಲ್ಲೇಖಿಸಿದೆ. "ಭಾರತವು ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿದೆ ಮತ್ತು ಜಗತ್ತು ಭಾರತೀಯ ಪ್ರಜಾಪ್ರಭುತ್ವವನ್ನು ಗೌರವಿಸುತ್ತದೆ ಎಂಬ ಬಗ್ಗೆ ಜಾಗತಿಕ ಒಮ್ಮತವಿದ್ದರೂ, ರಾಹುಲ್ ಅವರು ಭಾರತವನ್ನು ಆರ್ಥಿಕ ದುರಂತ ಎಂದು ಕರೆಯುತ್ತಾರೆ" ಎಂದು ಪ್ರದೀಪ್ ಭಂಡಾರಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.



ಆಸ್ಪತ್ರೆಯಲ್ಲಿ ಲೋಕಾಯುಕ್ತರಿಂದ ಶೋಧ

ಸಮಾಲೋಚನೆ ಸುದ್ದಿ ರಾಣೇಬೆನ್ನೂರು

ನಗರದ ತಾಲೂಕು ಸಾರ್ವಜನಿಕ ಆಸ್ಪತ್ರೆಯ ಆಡಳಿತ ಕುರಿತು ಸಾರ್ವಜನಿಕರಿಂದ ಹಾಗೂ ರೋಗಿಗಳ ಮೂಲಕ ದೂರುಗಳು ಬಂದ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಆಸ್ಪತ್ರೆಯಲ್ಲಿ ಬುಧವಾರ ದಿಢೀರ್ ಪರಿಶೀಲನೆ ನಡೆಸಿದರು.

ರಾಜ್ಯ ಲೋಕಾಯುಕ್ತ ಅಧಿಕಾರಿಗಳ ಆದೇಶದ ಮೇರೆಗೆ ಹಾವೇರಿ ಲೋಕಾಯುಕ್ತ ಪೊಲೀಸ್ ಠಾಣೆಯ ಅಧಿಕಾರಿಗಳು ಆಸ್ಪತ್ರೆಗೆ ಭೇಟಿ ನೀಡಿ ವಿವಿಧ ದಾಖಲೆಗಳನ್ನು ಪರಿಶೀಲನೆ ನಡೆಸಿದ್ದು, ಆಸ್ಪತ್ರೆಯಲ್ಲಿ ಔಷಧಿ ಹಾಗೂ ವೈದ್ಯಕೀಯ ಸಾಮಗ್ರಿಗಳ ಖರೀದಿಯಲ್ಲಿ ನಿಯಮ ಉಲ್ಲಂಘನೆಯಾಗಿರುವುದು ಮತ್ತು ಕೆಲ ವೈದ್ಯರು ಭ್ರಷ್ಟಾಚಾರದಲ್ಲಿ ತೊಡಗಿರುವ ಕುರಿತು ಪ್ರಾಥಮಿಕ ಪರಿಶೀಲನೆಯಲ್ಲಿ ಕಂಡುಬಂದಿರುವುದಾಗಿ ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಆಂಟೋನಿ ಜಾನ್ ಜೆ.ಕೆ. ಅವರ ಮಾರ್ಗದರ್ಶನದಲ್ಲಿ, ಕರ್ನಾಟಕ ಲೋಕಾಯುಕ್ತ ಅಧಿಕಾರಿ ಮಧುಸೂದನ ಸಿ. ಅವರ ನೇತೃತ್ವದಲ್ಲಿ ಆಸ್ಪತ್ರೆಯ ವಿವಿಧ ವಿಭಾಗಗಳಿಗೆ ಭೇಟಿ ನೀಡಿ ದಾಖಲೆಗಳು, ಔಷಧಿ ಖರೀದಿ ಪ್ರಕ್ರಿಯೆ ಹಾಗೂ ಆಸ್ಪತ್ರೆಯ ಆಡಳಿತಾತ್ಮಕ ಕಾರ್ಯವೈಖರಿ ಕುರಿತು ಅಧಿಕಾರಿಗಳು ಮಾಹಿತಿ ಸಂಗ್ರಹಿಸಿದರು. ಸಾರ್ವಜನಿಕ ಆಸ್ಪತ್ರೆಯ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆ ಕಾಪಾಡುವುದು ಹಾಗೂ ಸಾರ್ವಜನಿಕರಿಗೆ ಸಮರ್ಪಕ ಆರೋಗ್ಯ ಸೇವೆ ದೊರೆಯುವಂತೆ ಮಾಡುವ ನಿಟ್ಟಿನಲ್ಲಿ ಲೋಕಾಯುಕ್ತ ಅಧಿಕಾರಿಗಳ ಈ ಪರಿಶೀಲನೆ ನಡೆಸಿದ್ದಾರೆ ಎನ್ನಲಾಗಿದೆ.



ಚಿನ್ನ, ಬೆಳ್ಳಿ ಬೆಲೆಯಲ್ಲಿ ಭಾರಿ ಇಳಿಕೆ



ಬೆಂಗಳೂರು: ಚಿನ್ನ ಹಾಗೂ ಬೆಳ್ಳಿ ಖರೀದಿಗೆ ಮುಂದಾಗುವ ಗ್ರಾಹಕರಿಗೆ ಗುಡ್‌ನ್ಯೂಸ್. ಕೆಲದಿನಗಳಿಂದ ಸತತವಾಗಿ ಇಳಿಕೆಯ ಹಾದಿಯಲ್ಲಿರುವ ಚಿನ್ನದ ದರ ಭಾರತೀಯ ಮಾರುಕಟ್ಟೆಯಲ್ಲಿ ನ.18ರಂದು ಬುಧವಾರ ಒಂದೇ ದಿನಕ್ಕೆ 2780 ರೂಪಾಯಿಯಷ್ಟು ಭಾರಿ ಕುಸಿತವಾಗಿ ಚಿನ್ನದ ಬೆಲೆ 1.33 ಲಕ್ಷ ರೂ. ದಾಖಲಿಸಿದೆ. ಇಂದು ಬೆಳ್ಳಿ ಬೆಲೆಯಲ್ಲೂ 5000 ರೂ.ನಷ್ಟು ಭಾರಿ ಕುಸಿತವಾಗಿದೆ. ಇಂದಿನ ಚಿನ್ನದ ದರದ ಗುಡ್‌ರಿಟರ್ನ್ಸ್ ಬೆಲೆಪಟ್ಟಿ ಹೀಗಿದೆ..

24 ಕ್ಯಾರೆಟ್ ಚಿನ್ನದ ಬೆಲೆ: ನವೆಂಬರ್ 18 2026 ಬುಧವಾರದಂದು 24 ಕ್ಯಾರೆಟ್ 1 ಗ್ರಾಂ ಬೆಲೆಯಲ್ಲಿ 278 ರೂ ಇಳಿಕೆಯಾಗಿದ್ದು, 1 ಗ್ರಾಂ ಬೆಲೆ ಈಗ 13,326 ರೂಪಾಯಿ ದಾಖಲಾಗಿದೆ. 24 ಕ್ಯಾರೆಟ್ 10 ಗ್ರಾಂ ಬೆಲೆಯಲ್ಲಿ ಬರೋಬ್ಬರಿ 2780 ರೂ ಇಳಿಕೆಯಾಗಿದ್ದು, ಇಂದಿನ ಅಪರಂಜಿ ಚಿನ್ನದ ದರ 1,33,260ರೂ ದಾಖಲಾಗಿದೆ.

22 ಕ್ಯಾರೆಟ್ ಚಿನ್ನದ ಬೆಲೆ: 22 ಕ್ಯಾರೆಟ್ ಚಿನ್ನದ ಬೆಲೆಯಲ್ಲಿ ಇಂದು 255 ರೂ ಇಳಿಕೆಯಾಗಿದ್ದು, 1 ಗ್ರಾಂ ಬೆಲೆ ಈಗ 12,215ರೂ. ಆಗಿದ್ದು, 10 ಗ್ರಾಂ ಬೆಲೆನಲ್ಲಿ 2550 ರೂ ಇಳಿಕೆಯಾಗಿ ಈಗ 22 ಕ್ಯಾರಟ್ ಚಿನ್ನದ ಬೆಲೆ 1,22,150 ರೂಪಾಯಿ ದಾಖಲಾಗಿದೆ.

18 ಕ್ಯಾರೆಟ್ ಚಿನ್ನದ ಬೆಲೆ: 18 ಕ್ಯಾರೆಟ್ ಚಿನ್ನದ ಬೆಲೆಯಲ್ಲಿ ಇಂದು 209 ರೂ ಕುಸಿತ ಕಂಡುಬಂದಿದ್ದು, 1 ಗ್ರಾಂ ಬೆಲೆ ಈಗ 9,994 ರೂ ಆಗಿದ್ದು 10 ಗ್ರಾಂ ಬೆಲೆಯಲ್ಲಿ 2090 ರೂ ಕುಸಿದಿದ್ದು, ಈಗ 99,940 ರೂಪಾಯಿ ದಾಖಲಾಗಿದೆ.

ಬೆಳ್ಳಿ ಬೆಲೆಯಲ್ಲಿ ಭಾರಿ ಕುಸಿತ: ಭಾರತೀಯರ ಮಾರುಕಟ್ಟೆಯಲ್ಲಿ ನಿನ್ನೆ ಬೆಳ್ಳಿ ಬೆಲೆ ಸ್ಥಿರವಾಗಿದ್ದ ಬೆಳ್ಳಿ ಬೆಲೆ ಇಂದು ದಿಢೀರ್ 5000 ರೂಪಾಯಿ ಇಳಿಕೆಯಾಗಿದೆ. ನವೆಂಬರ್ 18 ರಂದು 1 ಗ್ರಾಂ ಬೆಳ್ಳಿ ಬೆಲೆ 185 ರೂ ದಾಖಲಾಗಿದೆ. ಪ್ರತಿ ಕೆ.ಜಿ ಬೆಳ್ಳಿ ಬೆಲೆ 1.85 ಲಕ್ಷ ರೂಪಾಯಿ ದಾಖಲಿಸಿದೆ.

ಮಾರುಕಟ್ಟೆಯಲ್ಲಿನ ಚಿನ್ನದ ಬೆಲೆಯ ವಿವರ (ನ.18ರಂದು)

ಚಿನ್ನದ ಶುದ್ಧತೆ	1 ಗ್ರಾಂ ಚಿನ್ನಬೆಲೆ	10 ಗ್ರಾಂ ಚಿನ್ನಬೆಲೆ	ಇಂದಿನ ವ್ಯತ್ಯಾಸ
24 ಕ್ಯಾರೆಟ್	13,326 ರೂ	1,33,260ರೂ	–2780
22 ಕ್ಯಾರೆಟ್	12,215 ರೂ	1,22,150ರೂ	–2550
18 ಕ್ಯಾರಟ್	9,994 ರೂ	99,940 ರೂ	–2090

ಸಮಾಲೋಚನೆ ಸುದ್ದಿ
ಕನ್ನಡ ದಿನ ಪತ್ರಿಕೆ
SAMALOCHANE RANEBENNURSUDDI
Kannada Daily Morning

ದುಶ್ಚಟಗಳಿಗೆ ಬಲಿಯಾಗಿ ಭವಿಷ್ಯ ಹಾಳು ಮಾಡಿಕೊಳ್ಳಬೇಡಿ: ಹನುಮಂತಗೌಡ ಗೊಲ್ಲರ

ಹಾವೇರಿ: ಓದುವ ವಯಸ್ಸಿನಲ್ಲಿ ದುಶ್ಚಟಗಳಿಗೆ ಬಲಿಯಾಗಿ ಅಮೂಲ್ಯವಾದ ಜೀವನವನ್ನು ಹಾಳು ಮಾಡಿಕೊಳ್ಳಬೇಡಿ. ತಪ್ಪು ಮಾಡುವುದುತಪ್ಪಲ್ಲ,ಮಾಡಿದತಪ್ಪುಗಳನ್ನುತಿದ್ದಿಕೊಳ್ಳದಿರುವುದು ಮಹಾ ತಪ್ಪು. ಇಂದು ಮಾಡುವ ತಪ್ಪು ನಾಳೆ ನಿಮ್ಮ ಭವಿಷ್ಯವನ್ನೇ ಕತ್ತಲೆಗೆ ತಳ್ಳಬಹುದು ಎಂದು ಸಾಹಿತಿ ಹನುಮಂತಗೌಡ ಗೊಲ್ಲರ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ತಾಲೂಕಿನ ಚಿಕ್ಕಲಿಂಗದಹಳ್ಳಿಯ ಶ್ರೀ ಬಸವೇಶ್ವರ ಸರ್ಕಾರಿ ಪ್ರೌಢಶಾಲೆಯಲ್ಲಿ ಮಂಗಳವಾರ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಆಯೋಜಿಸಿದ್ದ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಅವರು ಮಾತನಾಡಿದರು.ನಿಮ್ಮ ಮೇಲೆ ಅಪಾರ ನಂಬಿಕೆ ಇಟ್ಟಿರುವ ತಂದೆ–ತಾಯಿಯ ಕನಸುಗಳನ್ನು ಮರೆಯಬೇಡಿ. ಸಕ್ಕರೆಯ ಸಹವಾಸ ಮಾಡಿದ ಹಾಲು ಸಿಹಿಯಾಗುತ್ತದೆ,ಹುಳಿಯ ಸಹವಾಸ ಮಾಡಿದ ಹಾಲು ಒಡೆದು ಹೋಗುತ್ತದೆ. ಅದೇ ರೀತಿ ಉತ್ತಮರ ಸಹವಾಸ ಬದುಕನ್ನು ಸುಖಮಯವಾಗಿಸಿದರೆ, ದುರ್ಜನರ ಸಹವಾಸ ಬದುಕನ್ನು ಹಾಳು ಮಾಡುತ್ತದೆ. ಸಮಾಜದಲ್ಲಿ ಸಜ್ಜನರು ಮತ್ತು ದುರ್ಜನರು ಇಬ್ಬರೂ ಇರುತ್ತಾರೆ. ಯಾರ ಸಹವಾಸ ಮಾಡಬೇಕು ಎಂಬ ಆಯ್ಕೆ ನಮ್ಮದಾಗಿರಬೇಕು ಎಂದರು.

ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣಗಳ ಹೀರೋಗಳಾಗುವ ಬದಲು ನೈಜ ಜೀವನದಲ್ಲಿ ಸಾಧಕರಾಗಿ ಗುರುತಿಸಿಕೊಳ್ಳಬೇಕು. ಬದಲಾಗುತ್ತಿರುವ ಜೀವನಶೈಲಿ ಮತ್ತು ಆಹಾರ ಪದ್ಧತಿಯಿಂದ ವಿದ್ಯಾರ್ಥಿಗಳಲ್ಲಿ ಪೌಷ್ಟಿಕಾಂಶದ ಕೊರತೆ ಕಾಣಿಸಿಕೊಳ್ಳುತ್ತಿದೆ. ಆಹಾರವೇ ಔಷಧಿಯಾಗಬೇಕೇ ಹೊರತು ಔಷಧಿಯೇ ಆಹಾರವಾಗಬಾರದು. ಒಳ್ಳೆಯ ನಡೆ, ಒಳ್ಳೆಯ ನುಡಿ ಹಾಗೂ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಹುಟ್ಟು ನಮ್ಮ ಕೈಯಲ್ಲಿಲ್ಲ, ಆದರೆ ಬದುಕನ್ನು ರೂಪಿಸಿಕೊಳ್ಳುವುದು ನಮ್ಮ ಕೈಯಲ್ಲಿದೆ ಎಂದು ಉದಾಹರಣೆಗಳೊಂದಿಗೆ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ಶಿಕ್ಷಕಿ ಶಕುಂತಲಾ ಪೂಜಾರ ಮಾತನಾಡಿ, ಆರೋಗ್ಯ ಅತ್ಯಂತ ಅಮೂಲ್ಯವಾದ ಸಂಪತ್ತು. ಆರೋಗ್ಯವಂತ ಮಕ್ಕಳು ಕುಟುಂಬದ ಆಸ್ತಿ. ಉತ್ತಮ ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಮೈಗೂಡಿಸಿಕೊಂಡು ಭವಿಷ್ಯವನ್ನು ಉಜ್ವಲಗೊಳಿಸಿಕೊಳ್ಳಬೇಕು. ಉತ್ತಮ ಹವ್ಯಾಸಗಳು ಯಶಸ್ವಿ ಬದುಕಿಗೆ ಸೋಪಾನವಾಗಿವೆ ಎಂದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮೇಲ್ವಿಚಾರಕಿ ದೀಪಾರಾಣಿ ಮಾತನಾಡಿ, ವ್ಯಕ್ತಿಯಿಂದ ಸಮಾಜದವರೆಗೆ ಸಮಗ್ರ ಅಭಿವೃದ್ಧಿ ಸಾಧಿಸುವ ಉದ್ದೇಶದಿಂದ ಧರ್ಮಸ್ಥಳದ ಪೂಜ್ಯರು ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ರೂಪಿಸಿದ್ದಾರೆ. ಸ್ವಸಹಾಯ ಸಂಘಗಳ ಮೂಲಕ ಆರ್ಥಿಕ ಸೇರ್ಪಡೆ, ಮಹಿಳಾ ಸಬಲೀಕರಣಕ್ಕಾಗಿ ಜ್ಞಾನವಿಕಾಸ, ಸಮುದಾಯ ಅಭಿವೃದ್ಧಿಗಾಗಿ ನಮ್ಮೂರು ನಮ್ಮ ಕೆರೆ, ವಿದ್ಯಾರ್ಥಿಗಳಿಗಾಗಿ ಸುಜ್ಞಾನ ನಿಧಿ ಶಿಷ್ಯವೇತನ ಹಾಗೂ ಅಸಹಾಯಕರ ನೆರವಿಗಾಗಿ ವಾತ್ಸಲ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ವಿವರಿಸಿದರು. ವಿದ್ಯಾರ್ಥಿನಿ ದೀಕ್ಷಾ ಅಗಡಿ ಮಾತನಾಡಿ, ಸ್ವಾಸ್ಥ್ಯ ಸಂಕಲ್ಪದಂತಹ ವಿಶಿಷ್ಟ ಕಾರ್ಯಕ್ರಮ ನಮ್ಮ ಬದುಕಿಗೆ ಸಂಜೀವಿನಿಯಾಗಿದ್ದು, ಮನಃಪರಿವರ್ತನೆಗೆ ಪ್ರೇರಣೆ ನೀಡಿದೆ ಎಂದರು. ಮುಖ್ಯಶಿಕ್ಷಕ ಬಸವಮ್ಮನವರ, ದೇವೇಂದ್ರಪ್ಪ, ರವೀಂದ್ರನಾಥ ಮಳಗಿ, ನಂದಾ ಕುಂಚೂರ, ವಿದ್ಯಾ, ಭಾರತಿ ರಾಥೋಡ್, ಮಂಗಳ , ಚಿಕ್ಕಣ್ಣ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.ದೀಕ್ಷಾ ಮತ್ತು ಸಾನಿಯಾ ಪ್ರಾರ್ಥಿಸಿದರು. ಸಿಂಧು ಮುಳಗುಂದ ಸ್ವಾಗತಿಸಿದರು. ದೀಪಾರಾಣಿ ನಿರೂಪಿಸಿದರು. ಸೇವಾ ಪ್ರತಿನಿಧಿ ಲಕ್ಷ್ಮಿ ವಂದಿಸಿದರು.



ನಿಯಮ ಉಲ್ಲಂಘಿಸಿ ರಸ್ತೆ ಕಾಮಗಾರಿ ಮಾಡಿದರೆ ಹೋರಾಟ

ಸಮಾಲೋಚನೆ ಸುದ್ದಿ ಬ್ಯಾಡಗಿ



ಮುಖ್ಯರಸ್ತೆ ಅಗಲೀಕರಣ ಕಾಮಗಾರಿಯಲ್ಲಿನ ಅಳತೆಯಲ್ಲಿ ತಾರತಮ್ಯವನ್ನ ನಾವು ಒಪ್ಪಲ್ಲ ಎಲ್ಲರಿಗೂ ಒಂದೇ ಅಳತೆ 33 ಅಡಿ, ಆದರೆ ಕೆಲವು ಕಡೆ ಇದು ಪಾಲನೆ ಮಾಡಿಲ್ಲ ಒಂದು ವೇಳೆ ನಿಯಮ ಉಲ್ಲಂಘಿಸಿ ರಸ್ತೆ ಕಾಮಗಾರಿ ಮಾಡಿದಲ್ಲಿ ಮತ್ತೆ ಹೋರಾಟ ಆರಂಭಿಸಲಿದ್ದೇವೆ ಎಂದು ಮುಖ್ಯರಸ್ತೆ ಅಗಲೀಕರಣ ಹೋರಾಟ ಸಮಿತಿ ಅಧ್ಯಕ್ಷ ಸುರೇಶ ಛಲವಾದಿ ಎಚ್ಚರಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬ್ಯಾಡಗಿ ಪಟ್ಟಣದ ಮುಖ್ಯರಸ್ತೆ ಅಗಲೀಕರಣಕ್ಕಾಗಿ ಜನರು ಸುಮಾರು 15 ವರ್ಷಗಳಿಂದ ಹೋರಾಟ ನಡೆಸುತ್ತಾ ಬಂದಿದ್ದಾರೆ. ಇದೀಗ ಹಲವು ಹಂತಗಳ ಹೋರಾಟದ ಬಳಿಕ ಕಾಮಗಾರಿ ಆರಂಭವಾಗಿರುವುದು ಸಂತಸದ ಸಂಗತಿಯಾದರೂ, ಕಾಮಗಾರಿ ಆಮೆಗತಿಯಲ್ಲಿ ಸಾಗುತ್ತಿರುವುದು ಸಾರ್ವಜನಿಕರಲ್ಲಿ ತೀವ್ರ ಅಸಮಾಧಾನ ಮೂಡಿಸಿದೆ ಎಂದರು.

ಅಳತೆ ತಾರತಮ್ಯ ಏಕೆ?ಮುಖ್ಯರಸ್ತೆಯ ಹಗೆದಿಬ್ಬ, ಪಾಂಡುರಂಗ ಚಿತ್ರಮಂದಿರ ಸೇರಿದಂತೆ ಹಲವು ಪ್ರಮುಖ ಸ್ಥಳಗಳಲ್ಲಿ ರಸ್ತೆ ಅಗಲೀಕರಣದ ಅಳತೆ ಸಮರ್ಪಕವಾಗಿ ನಡೆದಿಲ್ಲ ಎಂಬ ದೂರುಗಳು ಕೇಳಿಬರುತ್ತಿವೆ. ಪಟ್ಟಣದ ಎಲ್ಲರಿಗೂ ಒಂದೇ ಮಾನದಂಡ ಅನ್ವಯವಾಗಬೇಕು. ಕೆಲವರಿಗೆ ಒಂದು ರೀತಿಯ ಅಳತೆ, ಇನ್ನು ಕೆಲವರಿಗೆ ಮತ್ತೊಂದು ರೀತಿಯ ಅಳತೆ ಮಾಡುವುದನ್ನು ಒಪ್ಪಲು ಸಾಧ್ಯವಿಲ್ಲ. ಅಧಿ ಕಾರಿಗಳು ಯಾವ ಒತ್ತಡಕ್ಕೂ ಮಣಿಯದೆ ಪಾರದರ್ಶಕವಾಗಿ ಕಾರ್ಯನಿರ್ವಹಿಸಬೇಕು. ಈಗಾಗಲೇ ಸಾಕಷ್ಟು ವರ್ಷಗಳ ಕಾಲ ಹೋರಾಟ ನಡೆಸಿದ್ದೇವೆ. ಮತ್ತೊಮ್ಮೆ ಹೋರಾಟದ ಹಾದಿ ಹಿಡಿಯುವ ಅನಿವಾರ್ಯತೆ ಸೃಷ್ಟಿಸಬೇಡಿ ಎಂದು ಅಧಿಕಾರಿಗಳಿಗೆ ಮನವಿ ಮಾಡಿದರು.

ಕಾರ್ಯದರ್ಶಿ ವರ್ಗಾವಣೆ ಬೇಡ: ಮುಖ್ಯರಸ್ತೆ ಅಗಲೀಕರಣ ಕಾಮಗಾರಿಯ ಜವಾಬ್ದಾರಿ ಹೊಂದಿರುವ ಎಪಿಎಂಸಿ ಕಾರ್ಯದರ್ಶಿ ಯನ್ನು ವರ್ಗಾವಣೆ ಮಾಡಿರುವುದು ಸೂಕ್ತ ನಿರ್ಧಾರವಲ್ಲ. ಈಗಾಗಲೇ ಕಾಮಗಾರಿ ಪ್ರಗತಿಯಲ್ಲಿರುವ ಸಂದರ್ಭದಲ್ಲಿ ಅಧಿಕಾರಿಗಳ ವರ್ಗಾವಣೆ ಮಾಡಿದರೆ ಕಾಮಗಾರಿಯ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ. ಹೊಸದಾಗಿ ಬರುವ ಅಧಿಕಾರಿಗೆ ಕಾಮಗಾರಿಯ ಸಂಪೂರ್ಣ ಹಿನ್ನೆಲೆ, ಭೂಸ್ವಾಧೀನ ಪ್ರಕ್ರಿಯೆ ಹಾಗೂ ಸ್ಥಳೀಯ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ಕಾರ್ಯನಿರ್ವಹಿಸಲು ಸಮಯ ಬೇಕಾಗುತ್ತದೆ. ಇದರಿಂದ ಮತ್ತಷ್ಟು ವಿಳಂಬವಾಗುವ ಆತಂಕವಿದೆ. ಆದ್ದರಿಂದ ಮುಖ್ಯರಸ್ತೆ ಅಗಲೀಕರಣ ಕಾಮಗಾರಿ ಪೂರ್ಣಗೊಳ್ಳುವವರೆಗೆ ಎಪಿಎಂಸಿ ಕಾರ್ಯದರ್ಶಿ ಸೇರಿದಂತೆ ಸಂಬಂಧಪಟ್ಟ ಯಾವುದೇ ಅಧಿಕಾರಿಗಳನ್ನು ವರ್ಗಾವಣೆ ಮಾಡಬಾರದು ಎಂದು ಆಗ್ರಹಿಸಿದರು.

ದೇಶವೇ ಬ್ಯಾಡಗಿಯತ್ತ ತಿರುಗಿ ನೋಡುವ ಹೋರಾಟ:ವಕೀಲ ಕಿರಣಕುಮಾರ ಎಂ.ಎಲ್. ಮಾತನಾಡಿ, ಜಿಲ್ಲಾಡಳಿತ ಹಾಗೂ ಭೂಸ್ವಾಧೀನ ಅಧಿಕಾರಿಗಳು ಜನರ ತಾಳ್ಮೆಯನ್ನು ಪರೀಕ್ಷಿಸಬಾರದು. ರಸ್ತೆ ಅಗಲೀಕರಣ ಕಾಮಗಾರಿಯಲ್ಲಿ ಉಂಟಾಗಿರುವ ಗೊಂ ದಲಗಳಿಗೆ ತಕ್ಷಣ ತೆರೆ ಎಳೆಯಬೇಕು. ನ.30 ರೊಳಗೆ ಮುಖ್ಯರಸ್ತೆಯ ಎಲ್ಲ ಭಾಗಗಳಲ್ಲಿಯೂ ಏಕರೂಪದ 33 ಅಡಿ ಅಳತೆ ಯನ್ನು ಖಚಿತಪಡಿಸಬೇಕು. ಡಿ.31 ರೊಳಗೆ ಚರಂಡಿ ಕಾಮಗಾರಿಯನ್ನು ಪೂರ್ಣಗೊಳಿಸಿ, ಯಾವುದೇ ವಿಳಂಬವಿಲ್ಲದೆ ರಸ್ತೆ ಕಾಮ ಗಾರಿ ಆರಂಭಿಸಬೇಕು ಅಧಿಕಾರಿಗಳು ಕೂಡಲೇ ಎಚ್ಚೆತ್ತುಕೊಂಡು ನಿಗದಿತ ಗಡುವಿನೊಳಗೆ ಕಾಮಗಾರಿ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಜನವರಿ ಮೊದಲ ವಾರದಲ್ಲಿ ದೇಶವೇ ಬ್ಯಾಡಗಿಯತ್ತ ತಿರುಗಿ ನೋಡುವಂತಹ ವಿನೂತನ ಹಾಗೂ ವಿಭಿನ್ನ ಹೋರಾಟವನ್ನು ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು. ಈ ವೇಳೆ ಪಾಂಡುರಂಗ ಸುತಾರ ಹಾಗೂ ಇತರರು ಉಪಸ್ಥಿತರಿದ್ದರು.

ಪ್ರಜಾಸೇವೆಗೆ ಸ್ಪಂದನೆ: 430 ಅರ್ಜಿಗಳ ಪೈಕಿ 370ಕ್ಕೆ ಉತ್ತರ

ಶಿರಹಟ್ಟಿ: ರಾಜ್ಯ ಸರ್ಕಾರದ ನೂತನ ಯೋಜನೆಯಾದ ಪ್ರಜಾಸೇವೆ ಕಾರ್ಯಕ್ರಮದಡಿ ಶಿರಹಟ್ಟಿ ತಾಲೂಕಿನಲ್ಲಿ ಇಲ್ಲಿಯವರೆಗೆ 5 ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು,ಸಾರ್ವಜನಿಕರಿಂದ ಒಟ್ಟು 430 ಅರ್ಜಿಗಳು ಸಲ್ಲಿಕೆಯಾಗಿವೆ. ಸಾರ್ವಜನಿಕರ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಆಲಿಸಿ, ಸಂಬಂಧಿಸಿದ ಇಲಾಖೆಗಳ ಮೂಲಕ ಪರಿಹಾರ ಒದಗಿಸುವ ಉದ್ದೇಶದಿಂದ ಆಯೋಜಿಸಲಾದ ಪ್ರಜಾಸೇವೆ ಕಾರ್ಯಕ್ರಮಗಳಿಗೆ ತಾಲೂಕಿನ ವಿವಿಧ ಗ್ರಾಮಗಳ ಜನರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದೆ.

ಸಲ್ಲಿಕೆಯಾದ 430 ಅರ್ಜಿಗಳ ಪೈಕಿ 370 ಅರ್ಜಿಗಳಿಗೆ ಈಗಾಗಲೇ ಸಂಬಂಧಿಸಿದ ಇಲಾಖೆಗಳ ಮೂಲಕ ಉತ್ತರ ಹಾಗೂ ಪರಿಹಾರ ಒದಗಿಸಲಾಗಿದೆ. ಉಳಿದ 60 ಅರ್ಜಿಗಳು ಮಾತ್ರ ಬಾಕಿ ಇದ್ದು, ಅವುಗಳ ವಿಲೇವಾರಿ ಪ್ರಕ್ರಿಯೆ ಮುಂದುವರಿದಿದೆ. ಸರ್ಕಾರದ ವಿವಿಧ ಯೋಜನೆಗಳು, ಸಾರ್ವಜನಿಕ ಸೇವೆಗಳು ಹಾಗೂ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಜನರು ಕಾರ್ಯಕ್ರಮಗಳಲ್ಲಿ ಅರ್ಜಿಗಳನ್ನು ಸಲ್ಲಿಸಿದ್ದು, ಬಹುತೇಕ ಅರ್ಜಿಗಳಿಗೆ ಸ್ಪಂದಿಸಿರುವುದು ಪ್ರಜಾಸೇವೆ ಕಾರ್ಯಕ್ರಮದ ಪರಿಣಾಮಕಾರಿತ್ವಕ್ಕೆ ಸಾಕ್ಷಿಯಾಗಿದೆ.



ಬಾಕಿ ಉಳಿದಿರುವ 60 ಅರ್ಜಿಗಳಿಗೂ ಶೀಘ್ರದಲ್ಲಿ ಪರಿಹಾರ ಒದಗಿಸಿ, ಸಾರ್ವಜನಿಕರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡಬೇಕು ಎಂಬುದು ಜನರ ಒತ್ತಾಯವಾಗಿದೆ.

ರಾಜ್ಯೋತ್ಸವ ಪ್ರಶಸ್ತಿಯಿಂದ ಜವಾಬ್ದಾರಿ ಹೆಚ್ಚಿದೆ: ವಾಸಣ್ಣ ಕುಸಗೂರ

ಸಮಾಲೋಚನೆ ಸುದ್ದಿ ರಾಣೇಬೆನ್ನೂರು

ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ದೊರೆತಿರುವುದರಿಂದ ನನ್ನ ಜವಾಬ್ದಾರಿ ಮತ್ತಷ್ಟು ಹೆಚ್ಚಾಗಿದೆ. ಕನ್ನಡದ ಕಾಯಕ ಮಾಡಲು ಹೊಸ ಹುಮ್ಮಸ್ಸು ಬಂದಿದೆ. ಉಸಿರು ಇರುವ ತನಕ ಕನ್ನಡದ ಉಳಿವಿಗಾಗಿ ಸದಾ ಪ್ರಾಮಾಣಿಕವಾಗಿ ಹಾಗೂ ಕಂಕಣಬದ್ಧವಾಗಿ ಶ್ರಮಿಸುವೆ ಎಂದು ಪ್ರಸಕ್ತ ಸಾಲಿನ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಹಿರಿಯ ಮುತ್ಸದ್ದಿ ವಾಸಣ್ಣ ಕುಸಗೂರ ಹೇಳಿದರು.

ನಗರದ ಅಶೋಕ ನಗರದ ಶಿಶುವಿಹಾರ ಮಹಿಳಾ ಸಮಾಜದ ವತಿಯಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಹಾಗೂ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಸಹಸ್ರಾರು ವರ್ಷಗಳ ಇತಿಹಾಸ ಹೊಂದಿರುವ ಮಾತೃಭಾಷೆ ಕನ್ನಡ ಇಂದು ಅಳಿವಿನ ಅಂಚಿನಲ್ಲಿದೆ. ಕನ್ನಡಿಗರಾದ ನಾವೇ ಕನ್ನಡವನ್ನು ಉಳಿಸಿ ಬೆಳೆಸುವ ಸಂಕಲ್ಪಮಾಡುವುದುಅನಿವಾರ್ಯವಾಗಿದೆ.ಮಾತೃಭೂಮಿಯಋಣತೀರಿಸಲು ನಿಷ್ಕಲ್ಮಶವಾಗಿ ಹಾಗೂ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಬೇಕು. ಸಾಧನೆಗಳೇ ಮಾತನಾಡಬೇಕೇ ಹೊರತು ಮಾತನಾಡುವುದೇ ಸಾಧನೆಯಾಗಬಾರದು. ಈ ಆಶಯವನ್ನು ಎಲ್ಲರೂ ಅರಿತು ಕನ್ನಡ ಸೇವೆಗೆ ಮುಂದಾಗಬೇಕು ಎಂದರು.

ಕರ್ನಾಟಕದಲ್ಲಿ ಕನ್ನಡವೇ ಆಡಳಿತ ಭಾಷೆಯಾಗಿ ಕಡ್ಡಾಯವಾಗಿ ಅನುಷ್ಠಾನಗೊಳ್ಳಬೇಕು. ಎಲ್ಲ ಸರ್ಕಾರಿ ಆದೇಶಗಳು ಕನ್ನಡದಲ್ಲಿಯೇ ಹೊರಬರಬೇಕು. ಸರ್ಕಾರಿ ಇಲಾಖೆಗಳಲ್ಲಿ ಕನ್ನಡಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡಬೇಕು. ಎಲ್ಲ ನಾಮಫಲಕಗಳು ಕನ್ನಡದಲ್ಲಿಯೇ ಇರಬೇಕು. ಆಗ ಮಾತ್ರ ಕನ್ನಡ ಭಾಷೆಗೆ ನಿಜವಾದ ಮೆರಗು ದೊರೆಯುತ್ತದೆ ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಿಶುವಿಹಾರ ಮಹಿಳಾ ಸಮಾಜದ ಅಧ್ಯ–ಕ್ಷೆ ಗಾಯಿತ್ರಮ್ಮ ಕುರುವತ್ತಿ ಮಾತನಾಡಿ, ಕನ್ನಡದ ಉಳಿವು ಮನೆಯಲ್ಲಿಯೇ ಆರಂಭವಾಗಬೇಕು. ಮಕ್ಕಳಿಗೆ ಪ್ರಾಥಮಿಕ ಹಂತದಿಂದಲೇ ಕನ್ನಡ ಭಾಷೆಯ ಅರಿವು ಮೂಡಿಸುವ ಕಾರ್ಯವನ್ನು ತಾಯಂದಿರು ಮಾಡಬೇಕು. ಮನೆಯಿಂದಲೇ ಕನ್ನಡದ ಬಳಕೆಗೆ ಪ್ರೋತ್ಸಾಹ ದೊರೆಯಬೇಕು ಎಂದರು.

ಹಿರಿಯ ಕವಯಿತ್ರಿ ದ್ರಾಕ್ಷಾಯಣಮ್ಮ ಹರಪನಹಳ್ಳಿ ಮಾತನಾಡಿ, ದೇಶ ಹಾಗೂ ನಾಡಿನ ಅಭಿವೃದ್ಧಿಯಲ್ಲಿ ಮಹಿಳೆಯರ ಕೊಡುಗೆ ಅಪಾರವಾಗಿದೆ. ಸ್ವಾತಂತ್ರ್ಯ ಹೋರಾಟಗಾರ್ತಿಯರಿಂದ ಹಿಡಿದು ಸೈನಿಕರು ಹಾಗೂ ಗಗನಯಾತ್ರಿಗಳವರೆಗೆ ಮಹಿಳೆಯರ ಸೇವೆ ಅನನ್ಯವಾಗಿದೆ ಎಂದರು. ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಅಂಗವಾಗಿ ಹಿರಿಯ ಪತ್ರಕರ್ತ ಎಂ. ಚಿರಂಜೀವಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ವಿದ್ಯಾರ್ಥಿನಿಯರಾದ ಹರ್ಷಿತಾ ಮುದ್ದಿ, ಪಿಸ್ತಾ ಕುಡಪಲಿ ಹಾಗೂ ಸಮೃದ್ಧಿ ಭಾನುವಳ್ಳಿ ಅವರು ಕನ್ನಡ, ಮಾತೃಭಾಷೆ ಮತ್ತು ರಾಜ್ಯೋತ್ಸವ ಕುರಿತು ಭಾಷಣ ಮಾಡಿದರು. ಬಳಿಕ ಮಕ್ಕಳಿಗೆ ಸಿಹಿ ವಿತರಿಸಲಾಯಿತು.ಕಾರ್ಯಕ್ರಮದಲ್ಲಿ ಅನ್ನಪೂರ್ಣಮ್ಮ ದಾನಪ್ಪನವರ, ಜಯಶ್ರೀ ಮುರಡಣ್ಣನವರ, ಗೀತಾ ಜಂಬಗಿ, ಲಕ್ಷ್ಮಿ ದೇವಗಿರಿ, ಚಂದ್ರಾ ದಾನಪ್ಪನವರ, ಪ್ರಭಯ್ಯ ಹಿರೇಮಠ, ಉಮಾ ಅಂಕಲಕೋಟಿ, ಮಂಜುಳಾ ಪಾಟೀಲ, ಗೀತಾ ಮಡಿವಾಳರ, ಗಿರಿಜಾ ಯಡಿಯಾಪುರ ಸೇರಿದಂತೆ ಸಮಾಜದ ಪದಾಧಿಕಾರಿಗಳು ಹಾಗೂ ಮಕ್ಕಳು ಉಪಸ್ಥಿತರಿದ್ದರು.



ಉಡಚಪ್ಪ ಮಾಳಗಿ ಅವರಿಗೆ ಭೀಮ ಸೇವಾ ರತ್ನ ಪ್ರಶಸ್ತಿಯನ್ನು ನೀಡಿ ಗೌರವ

ಹಾವೇರಿ: ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಮತ್ತು ಹಿಂದುಳಿದ ವರ್ಗ, ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ(ರಿ)ಯ ರಾಜ್ಯಾಧ್ಯಕ್ಷರಾದ ಉಡಚಪ್ಪ ಮಾಳಗಿ ಅವರಿಗೆ ಡಾ.ಬಾಬಾ ಸಾಹೇಬ ಅಂಬೇಡ್ಕರ ಸೇವಾಸಮಿತಿಎಸ್.ಸಿ/ಎಸ್.ಟಿ(ರಿ)ವತಿಯಿಂದಮುಂಡಗೋಡ ತಾಲ್ಲೂಕಿನ ಮಳಗಿಯ ಸಮುದಾಯ ಭವನದಲ್ಲಿ ಭೀಮ ಸೇವಾ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಿ ಸನ್ಮಾನಿಸಲಾಯಿತು.

ಡಾ.ಬಾಬಾ ಸಾಹೇಬ ಅಂಬೇಡ್ಕರ ಸೇವಾ ಸಮಿತಿ ಎಸ್.ಸಿ/ಎಸ್.ಟಿ(ರಿ)ಯ ರಾಜಾಧ್ಯಕ್ಷರಾದ ಯಲ್ಲಪ್ಪ ಹೊಸಮನಿ ಮಾತನಾಡಿ ಸೇವಾ ಸಮಿತಿಯಿಂದ ಸಮಾಜದಲ್ಲಿ ಉತ್ತಮ ಸಾಮಾಜಿಕ ಸೇವೆ ಸಲ್ಲಿಸಿದ ವ್ಯಕ್ತಿಗಳನ್ನು ಗುರುತಿಸಿ ಭೀಮ ಸೇವಾ ರತ್ನ ಪ್ರಶಸ್ತಿ ನೀಡುತ್ತಾ ಬರುತ್ತಿದ್ದೇವೆ.ಸಂಘಟನೆ ಹಾಗೂ ಸಮಾಜಮುಖಿ ಕೆಲಸ ಮಾಡುತ್ತಾ ಬರುತ್ತಿರುವ ಹಾಗೂ ಎಲ್ಲಾ ರಂಗದಲ್ಲಿ ತಮ್ಮದೆಯಾದ ಸೇವಾ ಮನೋಭಾವನೆ ಹೊಂದಿರುವ ಹಾವೇರಿ ಜಿಲ್ಲೆಯ ಉಡಚಪ್ಪ ಮಾಳಗಿ ಅವರಿಗೆ ಹಾಗೂ ಇನ್ನಿತರ ಹಲವಾರು ವ್ಯಕ್ತಿಗಳಿಗೂ ಭೀಮ ಸೇವಾ ರತ್ನ ಪ್ರಶಸ್ತಿ ನೀಡಲಾಗಿದೆ.ಪ್ರಶಸ್ತಿ ನೀಡಿ ಗೌರವಿಸಿ ಇನ್ನೂ ಹೆಚ್ಚು ಸಾಮಾಜಿಕ ಕೆಲಸಗಳನ್ನು ಭೀಮ ಸೇವಾ ರತ್ನ ಪ್ರಶಸ್ತಿ ಪುರಸ್ಕೃತರಾದ ಉಡಚಪ್ಪ ಮಾಳಗಿ ಮಾಡಲಿ ಎಂದು ಶಂಭ ಕೋರಿದರು.

ರಾಜ್ಯಾಧ್ಯಕ್ಷರಾದ ಉಡಚಪ್ಪ ಮಾಳಗಿ ಮ

SAMALOCHANE RANEBENNURSUDDI
Kannada Daily Morning

ಸಮಾಲೋಚನೆ ಸುದ್ದಿ
ಕನ್ನಡ ದಿನ ಪತ್ರಿಕೆ

ಗುರುವಾರ 19 ನವೆಂಬರ್ 2026
19 NOVEMBER 2026

ಭದ್ರಾ ಅಚ್ಚುಕಟ್ಟು ಪ್ರದೇಶದ ಕೊನೆ ಭಾಗದ ರೈತರಿಗೆ ನೀರು ಹರಿಸಲು ಶಾಸಕ ಬಿ.ಪಿ. ಹರೀಶ್ ಆಗ್ರಹ

ಹರಿಹರ: ದಾವಣಗೆರೆ ಜಿಲ್ಲೆಯ ಭದ್ರಾ ಅಚ್ಚುಕಟ್ಟು ಪ್ರದೇಶದ ಬಲದಂಡೆ ಕಾಲುವೆಗೆ ಭದ್ರಾ ಅಣೆಕಟ್ಟಿನಿಂದ ನೀರು ಹರಿಸದೆ ನಿರ್ಲಕ್ಷ್ಯ ತೋರುತ್ತಿರುವ ಸರ್ಕಾರದ ಧೋರಣೆಯನ್ನು ಖಂಡಿಸಿ ರೈತರು ನಡೆಸಿದ ಪ್ರತಿಭಟನೆಯಲ್ಲಿ ಹರಿಹರ ಶಾಸಕ ಬಿ.ಪಿ. ಹರೀಶ್ ಪಾಲ್ಗೊಂಡು ರೈತರ ಪರವಾಗಿ ಧ್ವನಿ ಎತ್ತಿದರು.

ಭದ್ರಾ ಅಣೆಕಟ್ಟಿನ ನೀರಾವರಿ ಸಲಹಾ ಸಮಿತಿಯ ಸಭೆ ಕರೆಯದೆ, ಏಕಪಕ್ಷೀಯವಾಗಿ ಭದ್ರಾವತಿ ತಾಲ್ಲೂಕಿಗೆ 2 ಟಿಎಂಸಿ ನೀರು ಹರಿಸಲು ನಿರ್ಧಾರ ಕೈಗೊಂಡಿರುವುದು ದಾವಣಗೆರೆ ಜಿಲ್ಲೆಯ ಭದ್ರಾ ಅಚ್ಚುಕಟ್ಟು ಪ್ರದೇಶದ ಕೊನೆಯ ಭಾಗದ ರೈತರಿಗೆ ಅನ್ಯಾಯ ಮಾಡಿದಂತಾಗಿದೆ ಎಂದು ಶಾಸಕರು ಆಕ್ಷೇಪ ವ್ಯಕ್ತಪಡಿಸಿದರು.

ದಾವಣಗೆರೆ ಜಿಲ್ಲೆಯ ಕೊನೆಯ ಭಾಗದ ರೈತರು ಕೃಷಿ ಬೆಳೆಗಳು, ತೋಟಗಾರಿಕೆ ಬೆಳೆಗಳು, ಜಾನುವಾರುಗಳ ನಿರ್ವಹಣೆ ಹಾಗೂ ಕುಡಿಯುವ ನೀರಿಗಾಗಿ ತೀವ್ರ ಸಮಸ್ಯೆ ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸರ್ಕಾರ ರೈತರ ಸಂಕಷ್ಟವನ್ನು ಗಂಭೀರವಾಗಿ ಪರಿಗಣಿಸಿ, ದಾವಣಗೆರೆ ಜಿಲ್ಲೆಯ ಭದ್ರಾ ಬಲದಂಡೆ ಕಾಲುವೆಗಳಿಗೆ ತಕ್ಷಣ ನೀರು ಹರಿಸಬೇಕು. ನೀರಿನ ಹಂಚಿಕೆಯಲ್ಲಿ ಕೊನೆಯ ಭಾಗದ ರೈತರಿಗೂ ಸಮಾನ ನ್ಯಾಯ ಒದಗಿಸಬೇಕು ಎಂದು ಅವರು ಒತ್ತಾಯಿಸಿದರು.

ರೈತರ ಹಕ್ಕುಗಳ ರಕ್ಷಣೆ ಹಾಗೂ ನೀರಿನ ನ್ಯಾಯಯುತ ಹಂಚಿಕೆಗಾಗಿ ಹೋರಾಟ ಮುಂದುವರಿಸುವುದಾಗಿ ಶಾಸಕ ಬಿ.ಪಿ. ಹರೀಶ್ ತಿಳಿಸಿದರು.



ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ವಿಶ್ವವಿದ್ಯಾಲಯಕ್ಕೆ ಭೇಟಿ

ಗದಗ: ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಸಚಿವರಾದ ಮಾನ್ಯ ಶ್ರೀ ಬಸವರಾಜ ರಾಯರೆಡ್ಡಿ ಅವರು ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಡಾ. ಸುರೇಶ್ ವಿ. ನಾಡಗೌಡರ ಅವರು ಸಚಿವರನ್ನು ಆತ್ಮೀಯವಾಗಿ ಸ್ವಾಗತಿಸಿದರು. ನಂತರ ಸಚಿವರು ವಿಶ್ವವಿದ್ಯಾಲಯದ ಆವರಣದಲ್ಲಿರುವ ಸಬರಮತಿ ಆಶ್ರಮದ ಪ್ರತಿಕೃತಿಯನ್ನು ಸಂದರ್ಶಿಸಿ, ಅದರ ಮಹತ್ವ ಹಾಗೂ ಆಶಯಗಳನ್ನು ವೀಕ್ಷಿಸಿದರು. ಅಲ್ಲದೆ, ಆಶ್ರಮದ ಸಮೀಪದಲ್ಲಿರುವ ಸ್ವಾಮಿ ವಿವೇಕಾನಂದರ ಪ್ರತಿಮೆಯನ್ನು ವೀಕ್ಷಿಸಿದರು.

ಬಳಿಕ ವಿಶ್ವವಿದ್ಯಾಲಯದ ವಿವಿಧ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಚಟುವಟಿಕೆಗಳ ಕುರಿತು ಮಾಹಿತಿ ಪಡೆದು ಅವಲೋಕನ ನಡೆಸಿದರು. ವಿಶ್ವವಿದ್ಯಾಲಯವು ಕೈಗೊಂಡಿರುವ ಶೈಕ್ಷಣಿಕ ಚಟುವಟಿಕೆಗಳು ಹಾಗೂ ಅಭಿವೃದ್ಧಿ ಕಾರ್ಯಗಳ ಕುರಿತು ಸಚಿವರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ. ಅಮರೇಶ್ ಯತಗಲ್, ಹಣಕಾಸು ಅಧಿಕಾರಿಗಳಾದ ಶ್ರೀ ಪ್ರಶಾಂತ್ ಜೆ.ಸಿ. ಹಾಗೂ ವಿಶ್ವವಿದ್ಯಾಲಯದ ಆಡಳಿತಾಧಿಕಾರಿಗಳು ಉಪಸ್ಥಿತರಿದ್ದರು.



ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಕಾರ್ತಿಕ ಸಹಸ್ರ ದೀಪೋತ್ಸವ 24ರಂದು



ಬಾಳೆಹೊನ್ನೂರು: ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದಲ್ಲಿ ನವಂಬರ್ 24ರ ಸಂಜೆ ಕಾರ್ತಿಕ ಸಹಸ್ರ ದೀಪೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ರಥೋತ್ಸವ ಜರುಗುವುದು.

ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ನಡೆಯುವ ದೀಪೋತ್ಸವವನ್ನು ಶೃಂಗೇರಿ ಶಾಸಕ ಟಿ.ಡಿ.ರಾಜೇಗೌಡರು ಉದ್ಘಾಟಿಸುವರು. ನಾಡಿನ ಶಿವಾಚಾರ್ಯರ ಬಳಗ ಸಹಯೋಗ ನೀಡುವರು.

ಅಂದು ಬೆಳಿಗ್ಗೆ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ, ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿಗೆ, ಶ್ರೀ ಸೋಮೇಶ್ವರ ಮಹಾಲಿಂಗ, ಶ್ರೀ ವಿಜಯ ವಿನಾಯಕ, ಶಕ್ತಿಮಾತೆಯರಾದ ಶ್ರೀ ಪಾರ್ವತಿ, ಶ್ರೀ ಚೌಡೇಶ್ವರಿ, ಶ್ರೀ ಭದ್ರಕಾಳಿ ಹಾಗೂ ಲಿಂಗೈಕ್ಯ ಶ್ರೀ ಜಗದ್ಗುರುಗಳವರ ಗದ್ದುಗೆಗಳಿಗೆ ವಿಶೇಷ ಪೂಜೆ ನಡೆಯುವುದು. ದೀಪೋತ್ಸವದ ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ಶ್ರೀ ವೀರಭದ್ರಸ್ವಾಮಿ ರಥೋತ್ಸವ ಜರುಗುವುದು.

ಹಾವೇರಿ ಜಿಲ್ಲೆ ಶಿಗ್ಗಾಂವಿಯ ಶ್ರೀಮತಿ ಲಲಿತಾದೇವಿ ಶಿವಪುತ್ರಯ್ಯ ಸುರಗೀಮಠ ಮತ್ತು ಮಕ್ಕಳು ದೀಪಾರಾಧನೆಯ ಸೇವೆಯನ್ನು, ಗುತ್ತಿಗೆದಾರ ಹುಬ್ಬಳ್ಳಿಯ ವೀರೇಶ ಪಾಟೀಲ ಹಾಗೂ ಬಾಳೆಹೊನ್ನೂರು ಬಾಸಾಪುರ ಕಡವಂತಿ ಆಲ್ದೂರು ಸದ್ಭಕ್ತರು ವಿದ್ಯುತ್ ದೀಪಾಲಂಕಾರ ಸೇವೆ ಮಾಡುವರು.

ಈ ಕಾರ್ಯಕ್ರಮದಲ್ಲಿ ನಾಡಿನ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಶ್ರೀ ಪೀಠದ ಪ್ರಕಟಣೆ ತಿಳಿಸಿದೆ.

ಅದ್ದೂರಿಯಾಗಿ ಜರುಗಿದ ಸಮನ್ವಯ 2026

ಗದಗ: ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆ ಕಾನೂನು ಮಹಾವಿದ್ಯಾಲಯದ ಕಾಲೇಜು ಒಕ್ಕೂಟ ಹಾಗೂ ಜಿಮಖಾನ್ ಮತ್ತು ಎನ್ ಎಸ್ ಎಸ್ ಚಟುವಟಿಕೆಗಳು ಉದ್ಘಾಟನಾ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಪ್ರಾರ್ಥನಾ ಗೀತೆಯನ್ನು ಕುಮಾರ ಪರಶುರಾಮ ಕಳಗಣ್ಣವರ ಹಾಡುವ ಮೂಲಕ ಕಾರ್ಯಕ್ರಮವನ್ನು ಆರಂಭಿಸಿದರು

ನಂತರ ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಾಯಿತು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಶ್ರೀಮತಿ ಪಲ್ಲವಿ ಬುಯ್ಯಾರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿದ ಶ್ರೀ ಮಿಥುನ್ ಹೆಚ್ ಎನ್ ಗದಗ್ ಜಿಲ್ಲಾ ವರಿಷ್ಠ ಅಧಿಕಾರಿಗಳು ಮಾತನಾಡಿ ಎಲ್ಲಾ ವಿದ್ಯಾರ್ಥಿಗಳೊಂದಿಗೆ ಭಾರತದಲ್ಲಿ ಇತ್ತೀಚೆಗೆ ಅತಿ ಹೆಚ್ಚು ಬಳಕೆಯಲ್ಲಿ ಂಖ ಬಳಕೆ ಮಾಡುತ್ತಿರುವುದನ್ನು ಕುರಿತು ಅದರ ಲಾಭ ಹಾಗೂ ಹಾನಿಯ ಬಗ್ಗೆ ಜಾಗೃತಿಯನ್ನ ಮೂಡಿಸುವುದರ ಮೂಲಕ ವಿದ್ಯಾರ್ಥಿಗಳಲ್ಲಿ ಂಖ ಹಾಗೂ ಅಂತರ್ಜಾಲ ಕುಸಿತದ ಬಗ್ಗೆ ಸವಿವರವಾಗಿ ತಿಳಿಸಿ ಕೊಡುವುದರ ಮೂಲಕ ವಿದ್ಯಾರ್ಥಿಗಳಲ್ಲಿ ಕಾನೂನಿನ ಅರಿವನ್ನು ಮೂಡಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿರುವ ಶ್ರೀ ಕೆ. ಎಚ್. ಪಾಟೀಲ್ ಅಧ್ಯಕ್ಷರು, ಜಿಲ್ಲೆಯ ಯೂತ್ ಕಾಂಗ್ರೆಸ್ ಕಮಿಟಿ ಗದಗ ಅವರು ತಮ್ಮ ವಿದ್ಯಾರ್ಥಿ ಜೀವನದ ಕುರಿತು ಎಲ್ಲಾ ವಿದ್ಯಾರ್ಥಿಗಳೊಂದಿಗೆ ಸವಿ ನೆನಪುಗಳನ್ನು ಹಂಚಿಕೊಳ್ಳುವುದರ ಮೂಲಕ ವಿದ್ಯಾರ್ಥಿ ಬದುಕಿನಲ್ಲಿ ಯಾವ ರೀತಿ ಶಿಸ್ತು ಬದ್ಧತೆ ಹಾಗೂ ಅವರ ಜ್ಞಾಪಕ ಶಕ್ತಿಯನ್ನು ಹೆಚ್ಚಿಸುವ ಕುರಿತು ತಿಳಿಸಿಕೊಟ್ಟರು. ಇನ್ನೋರ್ವ ಅತಿಥಿಗಳಾಗಿ ಆಗಮಿಸಿದ್ದ ನ್ಯಾಯವಾದಿ ಹಾಗೂ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಿಂಡಿ–ಕೇಟ್ ಸದಸ್ಯರಾಗಿರುವ ಶ್ರೀಮತಿ ಪದ್ಮಾವತಿ ಮಾನೆ ಇವರು ಕಾರ್ಯಕ್ರಮ ಕುರಿತು ಮಾತನಾಡುತ್ತಾ ವಿದ್ಯಾರ್ಥಿ ಜೀವನವು ಬಹುಮುಖ್ಯ ಅವರಲ್ಲಿ ಶಿಸ್ತು ಮತ್ತು ಸಂಯಮವನ್ನು ಕಾಪಾಡಿಕೊಳ್ಳುವಂತೆ ವಿದ್ಯಾರ್ಥಿಗಳಲ್ಲಿ ಕರೆ ನೀಡಿದರು. ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಡಾಕ್ಟರ್. ಸುರೇಶ್ ವಿ. ನಾಡಗೌಡ ಇವರು ಮಹಾವಿದ್ಯಾಲಯದ ವಿದ್ಯಾರ್ಥಿ ಒಕ್ಕೂಟದ ವಿಷಯಗಳನ್ನ ಚರ್ಚಿಸಿದರು ಜೊತೆಗೆ ಪ್ರಾಮಾಣಿಕತೆ. ಪುಸ್ತಕಗಳ ಜ್ಞಾನ ಹಾಗೂ ವಿದ್ಯಾರ್ಥಿ ಜೀವನವು ಬೆರಗು ಮೂಡಿಸುವಂತಹ ಪ್ರವೃತ್ತಿಯನ್ನು ಬೆಳೆಸಿಕೊಳ್ಳಬೇಕೆಂದು ವಿದ್ಯಾರ್ಥಿಗಳಲ್ಲಿ ಹುರುದುಂಬಿಸಿದರು. ಗದಗದ ಕೆ.ಎಲ್.ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ದಿನಾಂಕ : 06/ll 2026 ರಂದು ನೆಹರು ಯುವ ಕೇಂದ್ರ ಹಾಗೂ ಮೇರಾ ಯುವ ಭಾರತ್ ವತಿಯಿಂದ ಆಯೋಜಿಸಲಾಗಿದ್ದ ವಿಕಸಿತ ಭಾರತ ಯುವ ಸಂಸತ್ತು 2027ರ ಜಿಲ್ಲಾಮಟ್ಟದ ಸ್ಪರ್ಧೆಯಲ್ಲಿ ನಮ್ಮ ಮಹಾವಿದ್ಯಾಲಯದ ಇಬ್ಬರು ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದು ಅವರಿಗೆ ಪ್ರಶಸ್ತಿ ವಿತರಣೆ ಮಾಡಲಾಯಿತು. ಎಚ್ ಸಿ ಎಸ್ ಕಾನೂನು ಮಹಾವಿದ್ಯಾಲಯದ ಅಧ್ಯಕ್ಷರಾದ ಶ್ರೀ ಎಸ್. ಕೆ. ಪಾಟೀಲ, ವಕೀಲರು ಮತ್ತು ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಿಂಡಿಕೇಟ್ ಕೌನ್ಸಿಲ್ ಸದಸ್ಯರು ಅವರು ಓದಿನೊಂದಿಗೆ ಕ್ರೀಡೆಗಳು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಮುಂಚಣಿಯಲ್ಲಿ ಇರಬೇಕು ವಿದ್ಯಾರ್ಥಿಗಳು ತಾವು ಮುಂದೆ ನ್ಯಾಯವಾದಿಗಳು ಆಗುವುದರಿಂದ ಕಕ್ಷಿದಾರರಿಗೆ ನ್ಯಾಯ ಒದಗಿಸುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಶ್ರೀ ಎಸ್. ಕೆ. ನದಾಫ್ ವಕೀಲರು ಮತ್ತು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಶ್ರೀಮತಿ ಪಲ್ಲವಿ ಎಸ್ ಬಿ. ಪ್ರೊ. ಎಸ್. ಐ ಅಣ್ಣಿಗೇರಿ, ಪ್ರೊ. ಎಂ. ವಿ. ಹಿರೇಮಠ್, ಪ್ರೊ ಬಿ. ಎ. ಹಿರೇಮಠ್, ಪ್ರೊ. ಶ್ರೀಕಾಂತ ಐಲಿ , ಪ್ರೊ. ಮಹಾಂತೇಶ್ ಮಡ್ಡಿ, ಪ್ರೊ. ಬಸಮ್ಮ ಎಚ್, ಪ್ರೊ. ಚೈತ್ರ ಗೌಡರ, ಪ್ರೊ. ನಿವೇದಿತಾ ಮಾಲಿಪಾಟೀಲ್, ಪ್ರೊ.ರೇಷ್ಮಾ ಲಕ್ಕೆಶ್ವರ್. ಪ್ರೊ. ನೀಲಾಂಬಿಕ ಹಿರೇಮಠ್, ಸಾಂಸ್ಕೃತಿಕ ವಿಭಾಗದ ಸಂಯೋಜಕರಾದ ಪ್ರೊ. ನಾಜಿಮಾ ಮುಲ್ಲಾ ಮತ್ತು ಪ್ರೊ. ನಿಸಾರ್ ಅಹಮದ್ ಹಾಗೂ ವಿದ್ಯಾರ್ಥಿ ಪ್ರತಿನಿಧಿಯಾಗಿರುವ ಕು. ಸಕ್ರಪ್ಪ ಗೌಡರ ಮತ್ತು ಮಹಾವಿದ್ಯಾಲಯದ ಬೋಧಕ & ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ಕಾನೂನು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು.



ಎಸ್.ಎಸ್. ಎಲ್. ಸಿ. ಮಿಷನ್ 60 ಯಶಸ್ವಿಗೆ ಕರೆ

ನರಗುಂದ: ತಾಲೂಕಿನ ಸರಕಾರಿ, ಅನುದಾನಿತ ಹಾಗೂ ಅನುದಾನರಹಿತ ಪ್ರೌಢಶಾಲಾ ಶಿಕ್ಷಕರಿಗೆ 2026–27ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷಾ ಸುಧಾರಣೆಗಾಗಿ ಮಿಷನ್ 60 + ಅನ್ವಯ ವಿಷಯವಾರು ತರಬೇತಿ ಕಾರ್ಯಗಾರವನ್ನು ನರಗುಂದ ಬಿ ಆರ್ ಸಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿತ್ತು.

. ತರಬೇತಿ ಕಾರ್ಯಾಗಾರವನ್ನು ಉದ್ಘಾಟನೆ ಮಾಡಿದ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ವಿ. ಪಾಟೀಲ್ ಅವರು ಮಾತನಾಡಿ

ಕಳೆದ ವರ್ಷದಂತೆ 40 + ಮಿಷನ್ ಯಶಸ್ವಿಯಾಗಿದ್ದು ಈ ವರ್ಷ ಮಿಷನ್ 60 + ಅನ್ನು ತಾಲೂಕಿನ ಎಲ್ಲಾ ವಿಷಯಗಳ ಶಿಕ್ಷಕರು ತಮ್ಮ ಶಾಲೆಗಳ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ಪಾಠ ಬೋಧನೆ ಮಾಡುವ ಮೂಲಕ ಹಾಗೂ ವಿಶೇಷ ತರಗತಿಗಳನ್ನು ತೆಗೆದುಕೊಂಡು ತಾಲೂಕಿನ ಎಲ್ಲಾ ಎಸ್ ಎಸ್ ಎಲ್ ಸಿ ಮಕ್ಕಳು 60 ಪ್ಲಸ್ ಅಂಕಗಳನ್ನು ತೆಗೆದುಕೊಂಡು ಉತ್ತೀರ್ಣರಾಗುವಂತೆ ಮಾಡಬೇಕು ಎಂದು ತಿಳಿಸಿದರು.

ತರಬೇತಿ ಕಾರ್ಯಾಗಾರದಲ್ಲಿ ನ. 13ರಂದು ಧಾರವಾಡದ ಐಐಟಿ ಯಲ್ಲಿ ನಡೆದ ವಿಭಾಗಮಟ್ಟದ ಎಸ್ ಎಸ್ ಎಲ್ ಸಿ ಫಲಿತಾಂಶ ಸುಧಾರಣೆಯ ಮಿಷನ್ 60 ಪ್ಲಸ್ ಕಾರ್ಯಾಗಾರವನ್ನ ಶಿಕ್ಷಣ ಸಚಿವರಾದ ಮಧು ಬಂಗಾರಪ್ಪ ಅವರು ಚಾಲನೆ ಮಾಡಿದ್ದರು, ಆ ಒಂದು ಕಾರ್ಯಾಗಾರದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ರಶ್ಮಿ ಮಹೇಶ್ ಅವರು ಹಾಗೂ ಧಾರವಾಡ ವಲಯದ ಅಪರ ಆಯುಕ್ತರಾದ ಈಶ್ವರ್ ಉಳ್ಳಾಗಡ್ಡಿ ಅವರು ಹಾಗೂ ಗದಗ, ಹಾವೇರಿ ಮತ್ತು ಧಾರವಾಡ ಜಿಲ್ಲೆಯ ಡಿಡಿಪಿಐಯವರು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರತಿಯೊಂದು ತಾಲೂಕಿನಿಂದ ಎಸ್ ಎಸ್ ಎಲ್ ಸಿ ನೋಡಲ್ ಅಧಿಕಾರಿಗಳೊಂದಿಗೆ, ಪ್ರತಿ ವಿಷಯಕ್ಕೆ ಮೂರು ಜನ ಸಂಪನ್ಮೂಲ ವ್ಯಕ್ತಿಗಳನ್ನು ತರಬೇತಿ ಕಾರ್ಯಗಾರದಲ್ಲಿ ತರಬೇತಿ ನೀಡಲಾಗಿದ್ದು ಆ ತರಬೇತಿಯ ಅಂಶಗಳನ್ನು ನರಗುಂದ ತಾಲೂಕಿನ ಎಲ್ಲಾ ಶಾಲೆಗಳ ಶಿಕ್ಷಕರಿಗೆ ವಿಷಯವಾರು ತರಬೇತಿ ಕಾರ್ಯಗಾರವನ್ನು ಬಿ ಆರ್ ಸಿ ನರಗುಂದದಲ್ಲಿ ಹಮ್ಮಿಕೊಳ್ಳಲಾಗಿತ್ತು.

ತರಬೇತಿ ಕಾರ್ಯಾಗಾರದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿಗಳಾದ ಎನ್. ಆರ್. ನಿಡಗುಂದಿ, ಪ್ರೌಢ ಶಿಕ್ಷಣ ಸಂಯೋಜಕರು ಜಿ. ಎನ್. ದೊಡ್ಡಲಿಂಗಪ್ಪನವರ, ವಿವಿಧ ವಿಷಯಗಳ ಸಂಪನ್ಮೂಲ ವ್ಯಕ್ತಿಗಳು, ಬಿ ಆರ್‌ಪಿ ಗಳಾದ ಬಿ. ಆರ್. ರಾಯನಗೌಡ್ರ, ಬಿ. ಎ. ಬೋಯಿಟೆ ಹಾಗೂ ಎಂ. ಎಸ್. ಕುರಿ ಹಾಗೂ ನರಗುಂದ ನಂ 1 ಕ್ಲಸ್ಟರ್ ಸಿ ಆರ್ ಪಿ ಎಸ್ ವೈ ಸುರಕೋಡ ಅವರು ಭಾಗವಹಿಸಿದ್ದರು. ತಾಲೂಕಿನ ಎಲ್ಲಾ ಪ್ರೌಢ ಶಾಲೆಗಳ ಎಲ್ಲ ವಿಷಯಗಳ ಶಿಕ್ಷಕರು ಭಾಗವಹಿಸಿದ್ದರು.



ಶಿರಹಟ್ಟಿಯಲ್ಲಿ ವಿಬಿ–ಜಿ–ರಾಮ್–ಜಿ ಯೋಜನೆಯ ಸಮುದಾಯ ಕಾಮಗಾರಿಗಳ ಪ್ರಗತಿ ಪರಿಶೀಲನೆ

ಶಿರಹಟ್ಟಿ: ಗ್ರಾಮೀಣ ಪ್ರದೇಶಗಳ ಅಭಿವೃದ್ಧಿ ಹಾಗೂ ಗ್ರಾಮೀಣ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ಉದ್ದೇಶದಿಂದ ವಿಬಿ–ಜಿ–ರಾಮ್–ಜಿ ಯೋಜನೆಯಡಿ ಶಿರಹಟ್ಟಿ ತಾಲೂಕು ವ್ಯಾಪ್ತಿಯ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಕೈಗೊಳ್ಳಲಾಗಿರುವ ಸಮುದಾಯ ಕಾಮಗಾರಿಗಳ ಅನುಷ್ಠಾನಕ್ಕೆ ತಾಲೂಕು ಪಂಚಾಯಿತಿ ಆಡಳಿತ ಹೆಚ್ಚಿನ ಆದ್ಯತೆ ನೀಡಿದೆ.

ಈ ಹಿನ್ನೆಲೆಯಲ್ಲಿ ಶಿರಹಟ್ಟಿ ತಾಲೂಕು ವ್ಯಾಪ್ತಿಯ ನವೇ ಭಾವನೂರ, ಸಾಸಲವಾಡ, ಇಟಗಿ ಹಾಗೂ ಕೊಂಚಿಗೇರಿ ಗ್ರಾಮಗಳಲ್ಲಿ ವಿಬಿ–ಜಿ–ರಾಮ್–ಜಿ ಯೋಜನೆಯಡಿ ಪ್ರಗತಿಯಲ್ಲಿರುವ ವಿವಿಧ ಸಮುದಾಯ ಕಾಮಗಾರಿಗಳ ಸ್ಥಳಗಳಿಗೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ರಾಮಣ್ಣ ದೊಡ್ಡಮನಿ ಭೇಟಿ ನೀಡಿ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದರು.

ಭೇಟಿಯ ಸಂದರ್ಭದಲ್ಲಿ ಪ್ರತಿಯೊಂದು ಕಾಮಗಾರಿ ಸ್ಥಳವನ್ನು ವೀಕ್ಷಿಸಿದ ಅಧಿಕಾರಿಗಳು ಕಾಮಗಾರಿಗಳ ಪ್ರಸ್ತುತ ಸ್ಥಿತಿ, ಕೈಗೊಳ್ಳಲಾಗಿರುವ ಕೆಲಸದ ಪ್ರಮಾಣ, ಕಾರ್ಮಿಕರ ಹಾಜರಾತಿ, ಕಾಮಗಾರಿಗಳ ಅನುಷ್ಠಾನ ವಿಧಾನ ಹಾಗೂ ಕೆಲಸದ ಗುಣಮಟ್ಟದ ಕುರಿತು ಪರಿಶೀಲನೆ ನಡೆಸಿದರು. ಅಲ್ಲದೆ, ಕಾಮಗಾರಿಗಳಲ್ಲಿ ಯೋಜನೆಯ ನಿಯಮಾವಳಿ ಮತ್ತು ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸಂಬಂಧಪಟ್ಟ ಸಿಬ್ಬಂದಿಗಳಿಗೆ ಸೂಚನೆ ನೀಡಿದರು. ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕರ ಸಾಮೂಹಿಕ ಅಗತ್ಯಗಳನ್ನು ಈಡೇರಿಸುವ ನಿಟ್ಟಿನಲ್ಲಿ ಸಮುದಾಯ ಕಾಮಗಾರಿಗಳು ಮಹತ್ವದ ಪಾತ್ರ ವಹಿಸುತ್ತವೆ. ಆದ್ದರಿಂದ ಕಾಮಗಾರಿಗಳನ್ನು ಕೇವಲ ಪೂರ್ಣಗೊಳಿಸುವುದಷ್ಟೇ ಮುಖ್ಯವಲ್ಲ, ಅವು ದೀರ್ಘಕಾಲದವರೆಗೆ ಸಾರ್ವಜನಿಕರಿಗೆ ಉಪಯುಕ್ತವಾಗುವ ರೀತಿಯಲ್ಲಿ ಗುಣಮಟ್ಟದಿಂದ ಅನುಷ್ಠಾನಗೊಳಿಸುವುದು ಅತ್ಯಂತ ಅವಶ್ಯಕವಾಗಿದೆ ಎಂದು ತಿಳಿಸಿದರು. ಕಾಮಗಾರಿಗಳ ಅನುಷ್ಠಾನದಲ್ಲಿ ಯಾವುದೇ ರೀತಿಯ ವಿಳಂಬವಾಗದಂತೆ ಅಗತ್ಯ ಕ್

ಸಮಾಲೋಚನೆ ಸುದ್ದಿ
SAMALOCHANE RANEBENNURSUDDI
Kannada Daily Morning

ತಾಲೂಕು ಮಟ್ಟದ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಸಭೆ

ಅರ್ಹರಿಗೆ ಗ್ಯಾರಂಟಿ ಯೋಜನೆಗನ್ನು ತಲುಪಿಸಿ: ವೀರಯ್ಯ ಮಠಪತಿ

ಶಿರಹಟ್ಟಿ: ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆ ಅರ್ಹ ಫಲಾನುಭವಿಗಳಿಗೆ ತಲುಪಿಸುವ ಕಾರ್ಯ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಮಾಡಬೇಕು ಎಂದು ಗ್ಯಾರಂಟಿ ಯೋಜನೆಗಳ ತಾಲೂಕು ಸಮಿತಿ ಅಧ್ಯಕ್ಷ ವೀರಯ್ಯ ಮಠಪತಿ ತಾಕೀತು ಮಾಡಿದರು.

ಅವರು ಮಂಗಳವಾರ ತಾಲೂಕು ಪಂಚಾಯಿತಿಯಲ್ಲಿ ಕರೆದಿದ್ದ ಪಂಚ ಗ್ಯಾರಂಟಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಅರ್ಹ ಫಲಾನುಭವಿಗಳಿಗೆ ಯಾವುದೇ ಸಮಸ್ಯೆ ಆಗದಂತೆ ಗ್ಯಾರಂಟಿ ಯೋಜನೆಗಳು ಮುಟ್ಟಬೇಕು. ಅರ್ಹರಲ್ಲದವರಿಗೆ ಸರ್ಕಾರದ ಯಾವುದೇ ಯೋಜನೆಗಳ ಸೌಲಭ್ಯ ಹೋಗದಂತೆ ನೋಡಿಕೊಳ್ಳಬೇಕು. ಇದರಿಂದ ಸರ್ಕಾರಕ್ಕೆ ತುಂಬಾ ಸಹಾಯವಾಗುತ್ತದೆ ಎಂದರು.

ಗ್ಯಾರಂಟಿ ಯೋಜನೆಗಳ ಸದಸ್ಯರು ಸಭೆಯಲ್ಲಿ ತರುವ ಸಮಸ್ಯೆಗಳನ್ನು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ನಿರ್ಲಕ್ಷಿಸದೆ ಸಮಸ್ಯೆಯನ್ನು ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಮಹಿಳೆಯರ ಮತ್ತು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸಮಯಕ್ಕೆ ಸರಿಯಾಗಿ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸಬೇಕು ಮತ್ತು ನ್ಯಾಯ ಬೆಲೆ ಅಂಗಡಿಯಲ್ಲಿ ನೀಡುವ ಆಹಾರ ಧಾನ್ಯಗಳು ಸಮಯಕ್ಕೆ ಸರಿಯಾಗಿ ವಿತರಣೆ ಮಾಡಬೇಕು ಎಂದು ಸೂಚಿಸಿದರು.

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳು ಸಾಮಾನ್ಯ ಜನರ ಜೀವನ ಮಟ್ಟವನ್ನು ಸುಧಾರಿಸಿವೆ. ಬೇರೆ ರಾಜ್ಯಗಳಲ್ಲಿ ಪ್ರಶಂಸೆಗೆ ಪಾತ್ರವಾಗಿವೆ. ಯುವನಿಧಿ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕಾಲೇಜು ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಹೆಚ್ಚಿನ ಮಾಹಿತಿಗಳನ್ನು ನೀಡಲು ಶಿಬಿರಗಳನ್ನು ಆಯೋಜಿಸಬೇಕು. ಪ್ರತಿಯೊಂದು ಪಡಿತರ ವಿತರಣಾ ಕೇಂದ್ರಗಳಲ್ಲಿ ಕಡ್ಡಾಯವಾಗಿ ಸೂಚನಾ ಫಲಕಗಳನ್ನು ಪ್ರದರ್ಶನ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ್ ಯೋಜನಾಧಿಕಾರಿ ಹನುಮೇಶ ಕೊಂಡಿಕೊಪ್ಪ, ಗ್ಯಾರಂಟಿ ಸಮಿತಿ ಸದಸ್ಯರುಗಳಾದ ಶಿವನಗೌಡ ಪಾಟೀಲ, ದೇವಪ್ಪ ಲಮಾಣಿ, ರಾಘವೇಂದ್ರ ದೊಡ್ಡಮನಿ, ಮಲ್ಲಪ್ಪ ಹುಯಿಲಗೋಳ, ಸೋಮನಗೌಡ ಮರಿಗೌಡ್ರ, ಬುಡನಶ್ಯಾ ಮಕಾಂದಾರ ಹಾಗೂ ಅಧಿಕಾರಿಗಳು ಇದ್ದರು.



ಡಿಸೆಂಬರ್ 1 ರಂದು ಕರಡು ಮತದಾರರ ಯಾದಿ ಪ್ರಕಟ ಆಕ್ಷೇಪಣೆ ಸಲ್ಲಿಕೆಗೆ ಡಿಸೆಂಬರ್ 31ರಂದು ಕೊನೆಯ ದಿನ

ಗದಗ: ಭಾರತ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ದಿ: 01–01–2027 ರನ್ನು ಅರ್ಹತಾ ದಿನಾಂಕವೆಂದು ಪರಿಗಣಿಸಿ ವಿಧಾನಸಭಾ ಕ್ಷೇತ್ರಗಳ ಮತದಾರರ ಯಾದಿಗಳನ್ನು ವಿಶೇಷ ಸಂಕ್ಷಿಪ್ತ ಪರಿಷ್ಕರಣೆಯನ್ವಯ ಪರಿಷ್ಕರಿಸುವ ಬಗ್ಗೆ ಆಯೋಗವು ವೇಳಾ ಪಟ್ಟಿಯನ್ನು ಹೊರಡಿಸಿರುತ್ತಾರೆ. ಈ ವೇಳಾಪಟ್ಟಿಯನ್ವಯ ಗದಗ ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳಾದ 65–ಶಿರಹಟ್ಟಿ (ಪ.ಜಾ), 66–ಗದಗ, 67–ರೋಣ ಮತ್ತು 68–ನರಗುಂದ ನೇದ್ದವುಗಳಿಗೆ ಸಂಬಂಧಿಸಿದಂತೆ ಕರಡು ಮತದಾರರ ಯಾದಿಗಳನ್ನು ದಿನಾಂಕ: 01.12.2026 ರಂದು ಪ್ರಕಟಿಸಲಾಗುತ್ತದೆ.

ದಿನಾಂಕ: 01–01–2027 ಕ್ಕೆ ಇರುವಂತೆ 18 ವರ್ಷ ವಯಸ್ಸು ಪೂರ್ಣಗೊಂಡಿರುವವರು ಮತದಾರರ ಯಾದಿಗಳಲ್ಲಿ ಹೆಸರು ಇಲ್ಲದವರು ಈ ಅವಧಿಯಲ್ಲಿ ತಮ್ಮ ಹೆಸರುಗಳನ್ನು ನಮೂನೆ ನಂ. 6 ರಲ್ಲಿ ಸಲ್ಲಿಸಬಹುದು ಹಾಗೂ 2027 ನೇ ವರ್ಷದ ಅರ್ಹತಾ ದಿನಾಂಕಗಳಾದ 1ನೇ ಏಪ್ರಿಲ್, 2027, 1ನೇ ಜುಲೈ, 2027 ಅಥವಾ 1ನೇ ಅಕ್ಟೋಬರ್, 2027 ನೇದ್ದಕ್ಕೆ 18 ವರ್ಷ ವಯಸ್ಸು ಪೂರ್ಣಗೊಳ್ಳುವವರು, ಕರಡು ಮತದಾರ ಪಟ್ಟಿ ಪ್ರಕಟಣೆ ದಿನಾಂಕದಿಂದ ನಮೂನೆ 6 ರಲ್ಲಿ ಸೇರ್ಪಡೆಗೊಳಿಸಲು ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಇಂತಹ ಅರ್ಜಿಗಳನ್ನು ಆಯಾ ತ್ರೈಮಾಸಿಕಗಳಲ್ಲಿ ಅರ್ಹತೆಯನ್ನು ಪರಿಶೀಲಿಸಿ ನಿಯಮಾನುಸಾರ ನೋಂದಣಿ ಮಾಡಿಕೊಳ್ಳಲಾಗುವುದು. ಮತದಾರ ಪಟ್ಟಿಯಲ್ಲಿ ಹೊಸದಾಗಿ ಹೆಸರನ್ನು ಸೇರ್ಪಡೆ ಮಾಡಲು ನಮೂನೆ 6 ರಲ್ಲಿ ಅರ್ಜಿಸಲ್ಲಿಸುವ ಅರ್ಜಿದಾರನು ಅರ್ಜಿಗೆ ಇತ್ತೀಚಿನ ಪಾಸ್‌ಪೋರ್ಟ ಸೈಜ್ ಪೋಟೋ ಹಾಗೂ ವಿಳಾಸದ ಬಗ್ಗೆ ದಾಖಲೆಗಳು ಹಾಗೂ ವಯಸ್ಸಿನ ಬಗ್ಗೆ ದಾಖಲೆಗಳನ್ನು ನೀಡಲು ತಿಳಿಸಲಾಗಿದೆ.

ಮತದಾರರ ಪಟ್ಟಿಯಿಂದ ಹೆಸರನ್ನು ತೆಗೆದುಹಾಕುವ ಸಲುವಾಗಿ ನಮೂನೆ 7 ರಲ್ಲಿ ಅರ್ಜಿಸಲ್ಲಿಸುವುದು. ಮತದಾರರ ನಿವಾಸ ಬದಲಾವಣೆಯಿದ್ದಲ್ಲಿ (ಮತದಾರ ಪಟ್ಟಿಯ ಒಂದು ಭಾಗದಿಂದ ಇನ್ನೊಂದು ಭಾಗಕ್ಕೆ ಸ್ಥಳಾಂತರವಾಗಿದ್ದಲ್ಲಿ), ಪ್ರಸ್ತುತ ಮತದಾರರ ಪಟ್ಟಿಯಲ್ಲಿರುವ ನಮೂದುಗಳ ಸರಿಪಡಿಸಬೇಕಾಗಿದ್ದಲ್ಲಿ, ಯಾವುದೇ ತಿದ್ದುಪಡಿಗಳಿಲ್ಲದೆ ಬದಲಿ ಮತದಾರರ ಗುರುತಿನ ಚೀಟಿ (ಎಪಿಕ್) ಅವಶ್ಯಕತೆ ಇದ್ದಲ್ಲಿ ಅಥವಾ ಅಂಗವಿಕಲ ವ್ಯಕ್ತಿ ಎಂದು ಗುರುತಿಸುವುದಕ್ಕೆ ಮನವಿ ಸಲ್ಲಿಸಬೇಕಾಗಿದ್ದಲ್ಲಿ ನಮೂನೆ 8 ರಲ್ಲಿ ಮೇಲ್ಕಾಣಿಸಿದ ಅವಧಿಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಮೇಲೆ ವಿವರಿಸಿದಂತೆ ಕರಡು ಮತದಾರ ಪಟ್ಟಿಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ECINET Mobile App ಮುಖಾಂತರ ಅಥವಾ www.voters.eci.gov.in ರ ಮುಖಾಂತರ ಅಥವಾ ತಮ್ಮ ಕ್ಷೇತ್ರಕ್ಕೆ ಸಂಬಂಧಿಸಿದ ಮತಗಟ್ಟೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮತಗಟ್ಟೆ ಮಟ್ಟದ ಅಧಿಕಾರಿಗಳು (BLO), ಸಂಬಂಧಪಟ್ಟ ಮತದಾರ ನೋಂದಣಾಧಿಕಾರಿಗಳ ಕಾರ್ಯಾಲಯ (ಇಆರ್‌ಒ), ಸಂಬಂಧಪಟ್ಟ ತಹಶೀಲ್ದಾರರ ಕಾರ್ಯಾಲಯಗಳಲ್ಲಿ (AERO) ದಿನಾಂಕ: 01.12.2026 ದಿಂದ 31.12.2026 ರವರೆಗೆ ಸ್ವೀಕರಿಸಲಾಗುವುದು. ಸದರಿ ದಿನಾಂಕಗಳಂದು ಸ್ವೀಕೃತವಾಗುವ ಹಕ್ಕು ಮತ್ತು ಆಕ್ಷೇಪಣೆಗಳನ್ನು ನಿಯಮಾನುಸಾರ ವಿಲೇವಾರಿ ಮಾಡಿ ಚುನಾವಣಾ ಆಯೋಗದ ನಿರ್ದೇಶನದಂತೆ ದಿನಾಂಕ: 20.01.2027 ರಂದು ಅಂತಿಮ ಮತದಾರ ಪಟ್ಟಿಗಳನ್ನು ಪ್ರಕಟಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಸಂತ ಕನಕದಾಸರ ಜಯಂತಿ ನಿಮಿತ್ಯ ಪೂರ್ವಭಾವಿ ಸಭೆ

ಗದಗ: ಸರ್ಕಾರದ ಆದೇಶದನ್ವಯ ಪ್ರತಿ ವರ್ಷದಂತೆ ಈ ವರ್ಷವು ನವೆಂಬರ್ 27 ರಂದು ನಡೆಯುವ ಸಂತ ಕನಕದಾಸರ ಜಯಂತಿ ಕಾರ್ಯಕ್ರಮದ ನಿಮಿತ್ಯ ನವೆಂಬರ್ 19 ರಂದು ಗುರುವಾರ ಬೆಳಿಗ್ಗೆ 10.30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಕ್ಕಳಿಗೆ ಮಾತೃಭಾಷೆಯಲ್ಲಿಯೇ ಶಿಕ್ಷಣ ನೀಡಿ

ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಸೂಚನೆ । ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಸಭೆ



ಗದಗ: ಶಾಲೆಗಳಲ್ಲಿ ಮಕ್ಕಳಿಗೆ ಕನ್ನಡ ಭಾಷೆಯಲ್ಲಿಯೇ ಕಲಿಕೆ ಮಾಡಬೇಕು. ಮಕ್ಕಳಿಗೆ ಮಾತೃಭಾಷೆಗೆ ಹೆಚ್ಚು ಒತ್ತುಕೊಟ್ಟು ಗುಣಮಟ್ಟದ ಶಿಕ್ಷಣ ನೀಡಬೇಕು ಎಂದು ರಾಜ್ಯದ ಉನ್ನತ ಶಿಕ್ಷಣ ಸಚಿವ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಶಾಲಾ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣದ ನೀಡಬೇಕು. ಒಂದೊಮ್ಮೆ ಮಕ್ಕಳ ಕಲಿಕಾ ಅವಧಿಯಲ್ಲಿ ಕಲಿಸುವ ಶಿಕ್ಷಣದ ಗುಣಮಟ್ಟ ಕಳಪೆ ಮಟ್ಟದ್ದಾದರೆ ಮಕ್ಕಳ ಅಭಿವೃದ್ಧಿ ಕುಂಠಿತಗೊಳ್ಳುತ್ತದೆ. ಕಾಲೇಜುಗಳಲ್ಲಿನ ಉಪನ್ಯಾಸಕರಿಗೂ ಕಲಿಕಾ ತರಬೇತಿ ಅತ್ಯವಶ್ಯವಾಗಿದೆ. ಉಪನ್ಯಾಸಕರು ಸಂವಹನ ಕಲೆ ಹಾಗೂ ವಿದ್ಯಾರ್ಥಿಗಳಿಗೆ ಮನದಟ್ಟಾಗುವಂತೆ ಕಲಿಸುವ ನೈಪುಣ್ಯತೆ ರೂಢಿಸಿಕೊಳ್ಳಬೇಕು ಎಂದ ಸಚಿವರು ಜಿಲ್ಲೆಯಲ್ಲಿರುವ ದ್ವಿಭಾಷಾ ಶಾಲೆಗಳ ಮಾಹಿತಿ, ಸರ್ಕಾರಿ, ಅನುದಾನಿತ, ಅನುದಾನರಹಿತ ಶಾಲೆಗಳ ಮಾಹಿತಿಯನ್ನು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಂದ ಪಡೆದುಕೊಂಡರು. ಸಭೆಗೆ ಬರುವಾಗ ಇಲಾಖೆಯ ಕುರಿತು ಸಂಪೂರ್ಣವಾದ ಪೂರಕ ಮಾಹಿತಿಯನ್ನು ಒದಗಿಸಬೇಕು. ತಮ್ಮ ತಮ್ಮ ಇಲಾಖೆಯಲ್ಲಿ ಕುಂದುಕೊರತೆಗಳು, ಸುಧಾರಣೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಪಟ್ಟಿಯನ್ನು ತಯಾರಿಸಿಕೊಂಡು ಬರಬೇಕು ಎಂದರು.

ಅಕ್ಷರ ದಾಸೋಹ ಅಧಿಕಾರಿಗಳು ಮಾತನಾಡಿ ಅಕ್ಷರ ದಾಸೋಹ ಯೋಜನೆಯಡಿ 2026–27ನೇ ಸಾಲಿಗೆ ಒಟ್ಟು 1,18,478 ಫಲಾನುಭವಿಗಳು ಬಿಸಿಊಟ ಸೇವಿಸುತ್ತಿದ್ದು ಶೇ 100 ಪ್ರಗತಿ ಸಾಧಿಸಲಾಗಿದೆ. ಬಿಸಿಯೂಟದ ಜೊತೆಗೆ ಮಕ್ಕಳ ಆರೋಗ್ಯ ವೃದ್ಧಿಗಾಗಿ ಕ್ಷೀರ ಭಾಗ್ಯಯೋಜನೆಯಡಿ ಹಾಲು ಹಾಗೂ ಬೇಯಿಸಿದ ಮೊಟ್ಟೆ ಅಥವಾ ಮೊಟ್ಟೆ ತಿನ್ನದ ಮಕ್ಕಳಿಗೆ ಬಾಳೆ ಹಣ್ಣು, ರಾಗಿ ಮಾಲ್ಟ್ ವಿತರಿಸಲಾಗುತ್ತದೆ. ಗದಗ ಪ್ರದೇಶದ ಮಕ್ಕಳು ರಾಗಿ ಮಾಲ್ಟ್ ನ್ನು ಅಷ್ಟೊಂದು ಇಷ್ಟಪಡುವುದಿಲ್ಲ. ಆದಕಾರಣ ಅದಕ್ಕೆ ರ್‍ಯಾಯವಾಗಿ ಮಕ್ಕಳಿಗೆ ಹಾಲಿನ ಜೊತೆಗೆ ಬದಾಮಿ ಪೌಡರ್‌ನ್ನು ವಿತರಿಸಬಹುದಾದ ವಿಚಾರವನ್ನು ಸಚಿವರ ಗಮನಕ್ಕೆ ತಂದಾಗ ಸಚಿವರು ಈ ವಿಚಾರದ ಕುರಿತು ಪ್ರಶಂಶಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರು ಮಾತನಾಡಿ ಜಿಲ್ಲೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ 30 ಕಾಲೇಜುಗಳಿವೆ. 6833 ವಿದ್ಯಾರ್ಥಿಗಳಿದ್ದಾರೆ. 237 ಹುದ್ದೆಗಳು ಮಂಜೂರಾಗಿದ್ದು 137 ಹುದ್ದೆಗಳು ಖಾಲಿ ಇವೆ. ಗೋಗೇರಿಯಲ್ಲಿನ ಕಾಲೇಜಿನಲ್ಲಿ ಮಕ್ಕಳ ಸಂಖ್ಯೆ ಬಹಳ ಕಡಿಮೆ ಇದೆ ಎಂದು ಸಭೆಯ ಗಮನಕ್ಕೆ ತಂದರು.

ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ ಅವರು ಮಾತನಾಡಿ ಜಿಲ್ಲೆಯಲ್ಲಿ ವಿಬಿ–ಜಿ ರಾಮಜಿ ಯೋಜನೆಯಡಿ ಯಲ್ಲಿ ಉದ್ಯೋಗ ಚೀಟಿಗಳ ಸಂಖ್ಯೆ 165053 ಇದ್ದು, ಕ್ರಿಯಾಶೀಲ ಉದ್ಯೋಗ ಚೀಟಿಗಳ ಸಂಖ್ಯೆ 113326 ಇರುತ್ತದೆ. 364117 ನೊಂದಾಯಿತ ಕೂಲಿಕಾರರಿದ್ದು 233844 ಕ್ರಿಯಾಶೀಲ ನೊಂದಾಯಿತ ಕೂಲಿಕಾರರಿದ್ದಾರೆ. ಪ್ರಸ್ತುತ ಸಾಲಿನಲ್ಲಿ ವಿಬಿ–ಜಿ ರಾಮಜಿ ಯೋಜನೆಯಡಿ 21774 ವೈಯಕ್ತಿಕ ಕಾಮಗಾರಿಗಳು ಹಾಗೂ 10727 ಸಮುದಾಯ ಕಾಮಗಾರಿಗಳು ಸೇರಿದಂತೆ ಒಟ್ಟಾರೆ 32501 ಕಾಮಗಾರಿಗಳು ಅನುಮೋದನೆಗೊಂಡಿರುತ್ತವೆ. ಜುಲೈ 1 ರಿಂದ ನವೆಂಬರ್ 16 ರವರೆಗೆ 296184 ಮಾನವ ದಿನಗಳನ್ನು ಸೃಜಿಸಲಾಗಿದೆ ಎಂದು ಸಭೆಗೆ ಮಾಹಿತಿ ಒದಗಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ.ಕಂಬಾಳಿಮಠ ಅವರು ಮಾತನಾಡಿ ಜಿ.ಪಂ. ಗೆ ಜಿಲ್ಲಾ ವಲಯದಡಿ ವೇತನ, ವೇತನೇತರ, ಅಭಿವೃದ್ಧಿ ಕಾರ್ಯಕ್ರಮಗಳ ಅನುದಾನದ ಕುರಿತು ಮಾಹಿತಿ ಒದಗಿಸಿದರು. 16 ನೇ ಹಣಕಾಸು ಆಯೋಗದಡಿ ಜಿ.ಪಂ., ತಾ.ಪಂ. ಗ್ರಾ.ಪಂ. ಗಳಿಗೆ ಪ್ರತ್ಯೇಕ ಅನುದಾನ ಬರುತ್ತಿರುವ ಕುರಿತು ಮಾಹಿತಿ ಒದಗಿಸಿದರು.

ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್ ಅವರು ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಸಾಮಾಜಿಕ ಭದ್ರತಾ ಯೋಜನೆಗಳು, ಮಾಸಿಕ ಪಿಂಚಣಿ ವಿತರಣೆ, ವೇತನದ ವಿವರ ಹಾಗೂ ಮಂಜೂರಾದ ಹಾಗೂ ಖಾಲಿ ಇರುವ ಹುದ್ದೆಗಳ ಕುರಿತು ಮಾಹಿತಿ ಸಂಗ್ರಹಿಸಿದರು.

ವಿಶೇಷ ಅಭಿಯಾನ: ಭೂ ದಾಖಲೆಗಳ ಇಲಾಖೆಗೆ ಸಂಬಂಧಿಸಿದಂತೆ ತಾಲೂಕಾವಾರು ಸರ್ವೆ ಪ್ರಕರಣಗಳು ಬಾಕಿ ಇದ್ದು ಅವುಗಳ ಇತ್ಯರ್ಥಕ್ಕಾಗಿ ವಿಶೇಷ ಅಭಿಯಾನ ಹಂತವಾಗಿ ಮೊದಲಿಗೆ ಗಜೇಂದ್ರಗಡ ತಾಲೂಕಿನ 578 ಬಾಕಿ ಪ್ರಕರಣಗಳನ್ನು ಒಂದು ತಿಂಗಳೊಳಗಾಗಿ ಪೂರ್ಣಗೊಳಿಸಲು ವಿಶೇಷ ಅಭಿಯಾನ ಹಮ್ಮಿಕೊಳ್ಳಲು ಸಚಿವರು ಸೂಚಿಸಿದರು. ವಿಶೇಷ ಅಭಿಯಾನಕ್ಕೆ ಇದೇ ತಿಂಗಳು ಕೊನೆಯಲ್ಲಿ ಚಾಲನೆ ನೀಡಲಾಗುವುದು. ಡಿಸೆಂಬರ ಅಂತ್ಯದೊಳಗಾಗಿ ಗಜೇಂದ್ರಗಡ ತಾಲೂಕಿನ ಭೂ ದಾಖಲೆಗಳ ಸರ್ವೆ ಬಾಕಿ ಪ್ರಕರಣಗಳು ಮುಕ್ತಾಯಗೊಳಿಸಲು ಸಚಿವರು ಸೂಚಿಸಿದರು.

ನ.27 ರಂದು ತ್ರೈಮಾಸಿಕ ಕೆಡಿಪಿ : ಇದೇ ನವೆಂಬರ್ 27 ರಂದು ಮಧ್ಯಾಹ್ನ 3 ಗಂಟೆಯಿಂದ ಗದಗ ಜಿಲ್ಲೆಯ ತ್ರೈಮಾಸಿಕ ಕೆಡಿಪಿ ಸಭೆ ನಡೆಸಲಾಗುವುದು. ಸಭೆಗೆ ಸಂಪೂರ್ಣ ಮಾಹಿತಿಯೊಂದಿಗೆ ಇಲಾಖಾಧಿಕಾರಿಗಳು ಕಡ್ಡಾಯವಾಗಿ ಹಾಜರಾಗಿ ಪ್ರಗತಿ ವಿವರ ಸಲ್ಲಿಸಬೇಕೆಂದು ಸಚಿವ ಬಸವರಾಜ ರಾಯರಡ್ಡಿ ಸೂಚಿಸಿದರು.

ಪಿಡಿಓಗಳಿಗೆ ಕಾರ್ಯಾಗಾರ: ನೂತನವಾಗಿ ಅನುಷ್ಠಾನಗೊಳಿಸಲಾಗುತ್ತಿರುವ ವಿಬಿ–ಜಿ ರಾಮಜಿ ಖಾತ್ರಿ ಯೋಜನೆಯ ಕುರಿತು ಸಮಗ್ರವಾಗಿ ಅನುಷ್ಠಾನ ಅಧಿಕಾರಿಗಳಾದ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಮಾಹಿತಿ ಒದಗಿಸಲು ಎರಡು ದಿನಗಳ ಕಾರ್ಯಾಗಾರ ಏರ್ಪಡಿಸುವ ಮೂಲಕ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಹಾಗೂ ಆರ್ಥಿಕ ಭೌತಿಕ ಗುರಿ ಸಾಧನೆಗೆ ತರಬೇತಿ ಏರ್ಪಡಿಸುವಂತೆ ಜಿ.ಪಂ. ಅಧಿಕಾರಿಗಳಿಗೆ ಸಚಿವರು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಮಿಥುನ್ ಎಚ್.ಎನ್. ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿ.ಪಂ.ದ ಲೆಕ್ಕಾಧಿಕಾರಿ ಪ್ರಶಾಂತ ಜೆ.ಸಿ. ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಯುವನಿಧಿ; ಸ್ವಯಂ ಘೋಷಣೆ ಕಡ್ಡಾಯ

ಗದಗ: ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಅರ್ಹರು ಸೇವಾ ಒನ್ ಪೋರ್ಟಲ್, ಹತ್ತಿರದ ಗ್ರಾಮ ಒನ್ ಕೇಂದ್ರ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಯುವನಿಧಿ ಯೋಜನೆಗೆ ಅರ್ಜಿ ಸಲ್ಲಿಸಲು 2023, 2024, 2025 ಹಾಗೂ ಸದ್ಯ 2026ನೇ ಸಾಲಿನಲ್ಲಿ ಯಾವುದೇ ವೃತ್ತಿ ಪರ ಕೋರ್ಸ್, ಪದವಿ, ಡಿಪ್ಲೋಮಾ, ಸ್ನಾತಕೋತ್ತರ ಪದವಿ ಉತ್ತೀರ್ಣರಾಗಿ ಸರ್ಕಾರಿ/ಖಾಸಗಿ ಉದ್ಯೋಗ ಹೊಂದಿಲ್ಲದವರು, ಸ್ವ–ಉದ್ಯೋಗ ಹೊಂದಿಲ್ಲದವರು, ಮತ್ತು ಉನ್ನತ ವ್ಯಾಸಂಗ ಮುಂದುವರೆಸದೇ ಇರುವವರು ಹಾಗೂ ಕರ್ನಾಟಕದಲ್ಲಿ ಕನಿಷ್ಠ 06 ವರ್ಷ ವಾಸವಿರುವವರು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಅದರಂತೆ ಕಡ್ಡಾಯವಾಗಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆ ಹೊಂದಿರಬೇಕು. ಸದರಿ ಅರ್ಹತೆ ಹೊಂದಿದವರಿಗೆ ಫಲಿತಾಂಶ ದಿನಾಂಕದಿಂದ 180 ದಿನಗಳ ನಂತರ ಪದವೀಧರರಿಗೆ ಪ್ರತೀ ತಿಂಗಳು ರೂ.3,000/– ಹಾಗೂ ಡಿಪ್ಲೋಮಾ ಪಡೆದವರಿಗೆ ರೂ.1,500/– ಗಳನ್ನು ನೇರ ನಗದು ವರ್ಗಾವಣೆ ಮೂಲಕ ನಿರುದ್ಯೋಗ ಭತ್ಯೆ ನೀಡಲಾಗುತ್ತದೆ. ಹಾಗೆ ಮೊದಲ ಕಂತಿನ ಹಣ ಪಾವತಿಯಾದ ನಂತರ ಪ್ರತೀ ತಿಂಗಳು ದಿನಾಂಕ 25 ರ ಒಳಗಾಗಿ ಸ್ವಯಂ ಘೋಷಣೆ ಮಾಡುವುದು ಕಡ್ಡಾಯವಾಗಿದ